ವಿಜಯಪುರ | ಸಂಪುಟ 01 | ಸಂಚಿಕೆ 232 | ಪುಟ 4 | ₹ 3.00

https://udayarashminews.com

udayarashmi 7026028778


# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಮಂಗಳವಾರ, ನವೆಂಬರ್ 7, 2023



"ಡಿಸೆಂಬರ್ ವೇಳೆಗೆ ರಾಜ್ಯ ಸರ್ಕಾರ ದಿವಾಳಿ ಆಗುತ್ತದೆ. ಸಿಎಂ ಸಿದ್ದರಾಮಯ್ಯ ಕುರ್ಚಿ ಉಳಿಸಿಕೊಳ್ಳಲು ಹೆಣಗಾಡುತ್ತಿದ್ದಾರೆ, ಮತ್ತೊಬ್ಬರು ಸಿಎಂ ಆಗುತ್ತೇನೆ ಎಂಬ ಕನಸಿನಲ್ಲಿದ್ದಾರೆ. ಸಿದ್ದರಾಮಯ್ಯ ಅವರ ಕಾಲ್ಗುಣದಿಂದ ರಾಜ್ಯಕ್ಕೆ ಬರ ಬಂದಿದೆ.

– ಬಸನಗೌಡ ಪಾಟೀಲ, ಯತ್ನಾಳ
ಶಾಸಕರು, ವಿಜಯಪುರ

### ಲೂಟಿಗಾಗಿ ಸಿಎಂ–ಡಿಸಿಎಂ ನಡುವೆ ಪೈಪೋಟಿ । ಅಭಿವೃದ್ಧಿ ಕುಂಠಿತ । ಕರ್ನಾಟಕ ಹಾಳಾಗಿದೆ


# ತಾವೆಷ್ಟು ದಿನ ಸಿಎಂ ಎಂಬುದು ಸಿದ್ದುಗೇ ಗೊತ್ತಿಲ್ಲ!

### ಸಂಚಲನ ಮೂಡಿಸಿದ ಪ್ರಧಾನಿ ನರೇಂದ್ರ ಮೋದಿ ಹೇಳಿಕೆ

ಬೆಂಗಳೂರು: ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕ ಹಾಳಾಗಿದ್ದು, ತಾವು ಎಷ್ಟು ದಿನ ರಾಜ್ಯದ ಮುಖ್ಯಮಂತ್ರಿಯಾಗಿರುತ್ತೇನೆ ಎಂಬುದು ಸಿದ್ದರಾಮಯ್ಯ ಅವರಿಗೇ ತಿಳಿಯುದಂತಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ನೀಡಿರುವ ಹೇಳಿಕೆ ಸಂಚಲನ ಮೂಡಿಸಿದೆ.

ಮಧ್ಯಪ್ರದೇಶದ ಖಂಡವಾದಲ್ಲಿ ಭಾನುವಾರ ಬಹಿರಂಗ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಕೇವಲ ಆರು ತಿಂಗಳ ಹಿಂದೆ ರಚನೆಯಾದ ಕಾಂಗ್ರೆಸ್ ಸರ್ಕಾರವನ್ನು ನೋಡಿದರೆ ಎಲ್ಲವೂ ಗೊತ್ತಾಗುತ್ತದೆ. ಸಿಎಂ ಸಿದ್ದರಾಮಯ್ಯ ಎಷ್ಟು ದಿನ ರಾಜ್ಯಭಾರ ನಡೆಸುತ್ತಾರೋ ಎಂದು ಗೊತ್ತಿಲ್ಲ ಎಂದು ಹೇಳಿದ್ದಾರೆ.

ಕರ್ನಾಟಕದಲ್ಲಿ ಮುಖ್ಯಮಂತ್ರಿಯ ಮುಂದುವರಿಕೆ ಬಗ್ಗೆಯೇ ಗೊಂದಲಗಳು ಎದ್ದಿದ್ದು, ಅಭಿವೃದ್ಧಿ ಕುಂಠಿತಗೊಂಡಿದೆ. ಅಧಿಕಾರ ಹಿಡಿದಿರುವ ಕಾಂಗ್ರೆಸ್ ಭ್ರಷ್ಟಾಚಾರದಲ್ಲಿ ಭಾಗಿಯಾದ್ದರಿಂದ ಕರ್ನಾಟಕವನ್ನು ಅವರು ಹಾಳು ಮಾಡಿದ್ದಾರೆ ಎಂದು ಕಿಡಿಕಾರಿದ್ದಾರೆ.



ಕಾಂಗ್ರೆಸ್ ಪಕ್ಷ ಎಡವಟ್ಟಿನಿಂದ ಯಾವಾಗೆಲ್ಲಾ ಸರ್ಕಾರ ರಚನೆ ಮಾಡುತ್ತದೋ, ಆಗೆಲ್ಲಾ ಅಧಿಕಾರಕ್ಕೇರಿ ರಾಜ್ಯವನ್ನು ಲೂಟಿ ಮಾಡಲು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಡುವೆ ಪೈಪೋಟಿ ಏರ್ಪಡುತ್ತದೆ. ಅಂತಹ ಸುದ್ದಿ ಇದೀಗ ಕರ್ನಾಟಕದಿಂದ ಬರುತ್ತಿದೆ ಎಂದು ವಾಗ್ದಾಳಿ ನಡೆಸಿದ್ದರು.

ರಾಜ್ಯ ಬಿಜೆಪಿ ನಾಯಕರು ಮೊದಲಿನಿಂದಲೂ ಲೋಕಸಭಾ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ಇರಲ್ಲ ಎಂದು ಹೇಳುತ್ತಾ ಬರುತ್ತಿದ್ದಾರೆ. ಈ ಎಲ್ಲಾ ಬೆಳವಣಿಗೆಗಳ ಮಧ್ಯೆ ಖುದ್ದು ಪ್ರಧಾನಿ ಮೋದಿ ಅವರೇ ಸಿದ್ದರಾಮಯ್ಯ ಮುಖ್ಯಮಂತ್ರಿ ಹುದ್ದೆ ಕುರಿತು ಮಾತನಾಡಿರುವುದು ಹಲವು ಅಚ್ಚರಿಗಳಿಗೆ ಕಾರಣವಾಗಿದೆ

## ಸಿಎಂ ಸಿದ್ದರಾಮಯ್ಯ ತಿರುಗೇಟು



ಬೆಂಗಳೂರು: ಕರ್ನಾಟಕ ಸಿಎಂ ಬದಲಾವಣೆ ವಿಚಾರ ರಾಷ್ಟ್ರ ರಾಜಕಾರಣದಲ್ಲೂ ಸದ್ದು ಮಾಡುತ್ತಿದ್ದು, ಸಿದ್ದರಾಮಯ್ಯ ಅವರ ಸಿಎಂ ಸ್ಥಾನ ಎಷ್ಟು ದಿನ ಇರುತ್ತದೆ ಗೊತ್ತಿಲ್ಲ ಎಂದು ಮೋದಿ ವ್ಯಂಗ್ಯವಾಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ.

ಈ ಕುರಿತು ಮಾತನಾಡಿದ ಸಿದ್ದರಾಮಯ್ಯ, ಈಗಿನ ಮುಖ್ಯಮಂತ್ರಿಗಳು ಎಷ್ಟು ಅವಧಿಗೆ ಮುಖ್ಯಮಂತ್ರಿಗಳಾಗಿ ಉಳಿಯಲಿದ್ದಾರೆ ಎಂಬ ಪ್ರಧಾನಿಯವರ ರಾಜಕೀಯ ಭಾಷಣದಲ್ಲಿನ ಹೇಳಿಕೆಗೆ ಪ್ರತಿಕ್ರಿಯೆ ನೀಡುತ್ತಾ, ಕೇವಲ ಆರೋಪ ಮಾಡಬೇಕೆಂಬ ಉದ್ದೇಶದಿಂದ ಆರೋಪ ಮಾಡಲಾಗುತ್ತಿದ್ದು, ಇವೆಲ್ಲವೂ ಸುಳ್ಳಿನ ಕಂತೆ ಎಂದರು.

ಮಧ್ಯಪ್ರದೇಶದ ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಪ್ರಧಾನಿ ಮೋದಿಯವರು ಕರ್ನಾಟಕವನ್ನೇ ಗುರಿ ಮಾಡಿ ಮಾತನಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಪ್ರಚಾರ ಮಾಡಿದಲ್ಲೆಲ್ಲಾ ಬಿಜೆಪಿ ಸೋತಿದೆ. ರಾಜ್ಯದಲ್ಲಿ ಇದುವರೆಗೆ ವಿರೋಧಪಕ್ಷದ ನಾಯಕರನ್ನು ಆಯ್ಕೆಮಾಡಿಲ್ಲ. ಇದು ಬಿಜೆಪಿಯು ದಿವಾಳಿಯಾಗಿರುವುದನ್ನು ಸೂಚಿಸುತ್ತದೆ ಎಂದರು.

ಸಿಎಂ ಮತ್ತು ಡಿಸಿಎಂ ರಾಜ್ಯವನ್ನು ಲೂಟಿ ಮಾಡುತ್ತಿದ್ದಾರೆ ಎಂಬ ಪ್ರಧಾನಮಂತ್ರಿಗಳ ಭಾಷಣದಲ್ಲಿ ಮಾಡಿರುವ ಟೀಕೆಗೆ ಪ್ರತ್ಯುತ್ತರ ನೀಡಿದ ಸಿದ್ದರಾಮಯ್ಯ, 40 ಪರ್ಸೆಂಟ್ ಕಮೀಷನ್ ಸರ್ಕಾರ ಎಂಬ ಆರೋಪ ಬಿಜೆಪಿ ಸರ್ಕಾರದ ಮೇಲಿತ್ತು. ಈ ಬಗ್ಗೆ ನಮ್ಮ ಸರ್ಕಾರ ತನಿಖೆ ಮಾಡಿಸುತ್ತಿದೆ. ದೇಶದ ಪ್ರಧಾನಿಯಾದವರು ಈ ವಿಷಯದ ಬಗ್ಗೆಯೂ ಮಾತನಾಡಬೇಕಲ್ಲವೇ? ಕೇಂದ್ರ ಸರ್ಕಾರದ ಅಧೀನದಲ್ಲಿ ಎಲ್ಲ ತನಿಖಾ ಸಂಸ್ಥೆಗಳಿವೆ, ಪುರಾವೆಗಳು, ದಾಖಲೆಗಳಿಲ್ಲದೇ ಆರೋಪ ಮಾಡಬಾರದು.

ಇಂದು ಇಡೀ ದೇಶವೇ ದಿವಾಳಿಯಾಗಿದೆ. ರಾಜ್ಯದ ವಿರುದ್ಧ ಕೇಂದ್ರ ಮಲತಾಯಿ ಧೋರಣೆಯನ್ನು ತಳೆದಿದೆ. ಬರಗಾಲದ ಪರಿಹಾರವನ್ನು ರಾಜ್ಯಕ್ಕೆ ಬಿಡುಗಡೆ ಮಾಡಿಲ್ಲ. ರಾಜ್ಯದಲ್ಲಿ ಪಂಚ ಗ್ಯಾರಂಟಿಗಳನ್ನು ಜಾರಿಗೊಳಿಸಲು ಸಾಧ್ಯವೇ ಇಲ್ಲ ಎಂದು ಪ್ರಧಾನ ಮಂತ್ರಿಗಳು ಹೇಳಿದ್ದರು. ಆದರೆ ನಮ್ಮ ಸರ್ಕಾರ ಅವುಗಳನ್ನು ಸಾಧಿಸಿ ತೋರಿಸಿದೆ. ಇಂತಹ ಹೇಳಿಕೆಗಳನ್ನು ದೇಶದ ಪ್ರಧಾನ ಮಂತ್ರಿಗಳಿಂದ ಅಪೇಕ್ಷಿಸಿರಲಿಲ್ಲ. ತಮ್ಮ ರಾಜಕೀಯ ಭಾಷಣದಲ್ಲಿ ರಾಜ್ಯದ ಬಗ್ಗೆ ಟೀಕೆಗಳನ್ನು ಮಾಡುವುದು ಪ್ರಧಾನಮಂತ್ರಿಯವರಿಗೆ ಶೋಭೆ ತರುವಂಥದ್ದಲ್ಲ ಎಂದರು.

### ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ

# ಕೃಷಿ ಪಂಪ್‌ಸೆಟ್‌ಗಳಿಗೆ ನಿತ್ಯ 7ಗಂಟೆ ವಿದ್ಯುತ್ ಸರಬರಾಜು

**ಉದಯರಶ್ಮಿ ನ್ಯೂಸ್**

ಬೆಂಗಳೂರು: ರಾಜ್ಯದಲ್ಲಿ ನೀರಾವರಿ ಪಂಪ್‌ಸೆಟ್‌ಗಳಿಗೆ 7 ಗಂಟೆಗಳ ವಿದ್ಯುತ್ ಸರಬರಾಜು ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ



ತಿಳಿಸಿದರು.

ಇಂಧನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ನಂತರ ಅವರು ಈ ವಿಷಯ ತಿಳಿಸಿದರು.

ರಾಜ್ಯದಲ್ಲಿ ವಿದ್ಯುತ್ ಕೊರತೆಯಿದೆ ಎಂದು ನೀರಾವರಿ ಪಂಪ್‌ಸೆಟ್‌ಗಳಿಗೆ ಏಳು ಗಂಟೆಗಳ ಕಾಲ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ನೀಡಲು ಮೊದಲೇ ಘೋಷಣೆ ಮಾಡಿದ್ದೆವು. ಕೆಲವು ಜನ ಸತತವಾಗಿ ಮೂರು ಫೇಸ್‌ನಲ್ಲಿ 5 ಗಂಟೆ ವಿದ್ಯುತ್ ನೀಡಿದರೆ ಸಾಕು ಎಂದಿದ್ದರು. ಅದಕ್ಕಾಗಿ 5 ಗಂಟೆಗಳ ಕಾಲ 3 ಫೇಸ್‌ನಲ್ಲಿ ವಿದ್ಯುತ್ ನೀಡುವಂತೆ ಸೂಚನೆ ನೀಡಲಾಗಿತ್ತು. ರಾಯಚೂರು, ಕೊಪ್ಪಳ, ಬಳ್ಳಾರಿ, ಯಾದಗಿರಿ ರೈತರು ಭೇಟಿ ಮಾಡಿ ಭತ್ತ ಬೆಳೆಯುವುದ-ರಿಂದ 5 ಗಂಟೆಗಳ ಕಾಲ ವಿದ್ಯುತ್ ನೀಡುವುದು ಸಾಕಾಗುವುದಿಲ್ಲ, 7 ಗಂಟೆಗಳ ಕಾಲ ನೀಡಬೇಕೆಂದು ಎಂದು ಮನವಿ ಮಾಡಿದರು. ಕಬ್ಬು ಹಾಗೂ ಭತ್ತ ಕಟಾವಿಗೆ ಬಂದಿರುವುದರಿಂದ ಈ ಭಾಗದಲ್ಲಿ 7 ಗಂಟೆಗಳ ಕಾಲ ವಿದ್ಯುತ್ ನೀಡಬೇಕು ಎಂದು ಸೂಚನೆ ನೀಡಲಾಗಿದೆ. ಉಳಿದ ಭಾಗಗಳಿಗೆ ನೀಡುತ್ತಿದ್ದ 5 ಗಂಟೆಗಳ ವಿದ್ಯುತ್‌ನ್ನು 7 ಗಂಟೆಗಳ ಕಾಲ ನೀಡಲು ಸಾಧ್ಯವಾಗುತ್ತದೆ ಎಂದು ಇಂದಿನ ಸಭೆಯಲ್ಲಿ ಅಭಿಪ್ರಾಯಕ್ಕೆ ಬರಲಾಗಿದೆ ಎಂದರು.

ವಿದ್ಯುತ್ ಉತ್ಪಾದನೆಯಲ್ಲಿ ಹೆಚ್ಚಳ

ರಾಯಚೂರು, ಬಳ್ಳಾರಿಯಲ್ಲಿ ಥರ್ಮಲ್ ಘಟಕಗಳಿದ್ದು, ರಾಜ್ಯದಲ್ಲಿ ಥರ್ಮಲ್, ಜಲವಿದ್ಯುತ್, ಸೋಲಾರ್ ಮೂಲಕ ವಿದ್ಯುತ್ ಉತ್ಪಾದಿಸುತ್ತಿದ್ದು. ಥರ್ಮಲ್ ಘಟಕವು 1000 ಮೆಗಾ ವ್ಯಾಟ್ ಉತ್ಪಾದಿಸುತ್ತಿದೆ. ಸುಮಾರು 2400 ರಿಂದ 3200 ಮೆ.ವ್ಯಾ, ವಿದ್ಯುತ್ ಉತ್ಪಾದನೆ ಹೆಚ್ಚಾಗಿದೆ. ಕಬ್ಬು ಅರೆಯುವುದು ಪ್ರಾರಂಭವಾಗಿ ಕೋ-ಜನರೇಷನ್ ಆಗಿರುವುದರಿಂದ 450 ಮೆ.ವ್ಯಾಟ್ ಉತ್ಪಾದನೆಯಾಗಿದೆ. ಕೂಡ್ಲಗಿಯಲ್ಲಿ 150 ಮೆ.ವ್ಯಾ ಕರ್ನಾಟಕಕ್ಕೆ ಉಳಿತಾಯವಾಗಲಿದೆ ಹಾಗೂ ಖರೀದಿ ಮಾಡುತ್ತಿರುವುದ-ರಿಂದ ಹೆಚ್ಚು ವಿದ್ಯುತ್ ದೊರೆಯಲಿದೆ. ಹಾಗಾಗಿ ಇಂದಿನಿಂದ 7 ತಾಸು ವಿದ್ಯುತ್‌ನ್ನು ಪಂಪ್‌ಸೆಟ್‌ಗಳಿಗೆ ನೀಡುತ್ತಿದ್ದೇವೆ. ಕೈಗಾರಿಕೆಗಳಿಗೆ, ಗೃಹಬಳಕೆಗೆ ವಿದ್ಯುತ್ ಕಡಿತ ಮಾಡಲಾಗುತ್ತಿಲ್ಲ. ಪಂಪ್‌ಸೆಟ್‌ಗಳಿಗೆ ನೀಡುವ ವಿದ್ಯುತ್ ಸಹಾಯಧನವನ್ನು ಸರ್ಕಾರವೇ ನೀಡಿದೆ. 13100 ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಒದಗಿಸಲಾಗಿದೆ ಎಂದರು.

ಭಾಗ್ಯಜ್ಯೋತಿ, ಕುಟೀರ ಜ್ಯೋತಿಗೆ 18 ಯೂನಿಟ್‌ಗಳ ಮಿತಿಯಿತ್ತು. ಅದನ್ನು 40 ಯೂನಿಟ್‌ಗಳಿಗೆ ನಮ್ಮ ಸರ್ಕಾರವೇ ಹಿಂದೆ ಹೆಚ್ಚಳ ಮಾಡಿತ್ತು. ಈ ಗೃಹಜ್ಯೋತಿ ಬಂದ ನಂತರ ಭಾಗ್ಯಜ್ಯೋತಿ, ಕುಟೀರ ಜ್ಯೋತಿ, ಅಮೃತಜ್ಯೋತಿಗಳನ್ನು ಗೃಹಜ್ಯೋತಿ ಯೋಜನೆಯಡಿ ಸೇರಿಸಿ, 58 ಯೂನಿಟ್‌ವರಗೆ ಉಚಿತವಾಗಿ ವಿದ್ಯುತ್ ನೀಡಲು ತೀರ್ಮಾನಿಸಿದೆ. ಭಾಗ್ಯಜ್ಯೋತಿ, ಕುಟೀರ ಜ್ಯೋತಿ, ಅಮೃತಜ್ಯೋತಿ ಯೋಜನೆಗಳಡಿ 389.66 ಕೋಟಿ ರೂ.ಗಳು ಬಾಕಿ ಉಳಿದಿದ್ದವು. ಬಾಕಿ ಇರುವುದ-ರಿಂದ ಗೃಹಜ್ಯೋತಿಯಡಿ ಉಚಿತ ಕೊಡುವುದು ಕಷ್ಟವಾಗುತ್ತಿತ್ತು. ಆದ-ದ್ದರಿಂದ ಬಾಕಿ ಮೊತ್ತವನ್ನು ಒಂದು ಬಾರಿಗೆ ಮನ್ನಾ ಮಾಡಲಾಗುತ್ತಿದೆ. ಇನ್ನು ಮುಂದೆ ಬಾಕಿ ಕೊಡಬೇಕಾದ ಅಗತ್ಯವಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಜೂನಿಯರ್ ಕಾಲೇಜುಗಳಿಗೆ ನವೆಂಬರ್ 1 ರಂದು ಘೋಷಿಸಿದಂತೆ ವಿದ್ಯುತ್ ಹಾಗೂ ನೀರಿನ ವೆಚವನ್ನು ಸರ್ಕಾರವೇ ಭರಿಸಲಿದೆ ಎಂದು ಸಭೆಯಲ್ಲಿ ತೀರ್ಮಾನ ಮಾಡಲಾಗಿದೆ. ಮುಂದಿನ ಮುಂಗಾರಿನವರೆಗೆ ಮಳೆ ಬರುವುದಿಲ್ಲ ಎಂದು ಲೆಕ್ಕ ಹಾಕಿಯೇ ಈ ತೀರ್ಮಾನ ಮಾಡಲಾಗಿದೆ. ಜುಲೈ ಅಂತ್ಯದವರೆಗೆ ಲೆಕ್ಕ ಹಾಕಲಾಗಿದೆ ಎಂದರು.


ಶೇ 70 ರಷ್ಟು ಥರ್ಮಲ್ ವಿದ್ಯುತ್ ಉತ್ಪಾದನೆ:

ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಉತ್ತರಿಸಿ ವಿದ್ಯುತ್ ಖರೀದಿಯ ಮೊತ್ತ ಎಷ್ಟು ವಿದ್ಯುತ್ ಖರೀದಿಸುತ್ತೇವೆ ಎನ್ನುವುದರ ಮೇಲೆ ಅವಲಂಬಿತವಾಗಿದೆ. ಶೇ 70 ರಷ್ಟು ಥರ್ಮಲ್ ವಿದ್ಯುತ್ ಉತ್ಪಾದನೆಯಾಗುತ್ತಿದೆ 1000 ಯೂನಿಟ್‌ವರೆಗೆ ವಿದ್ಯುತ್ ಹೊರಗಿನಿಂದ ಖರೀದಿಯಾಗುತ್ತಿದೆ ಎಂದರು. ಸ್ಥಳೀಯ ಹಾಗೂ ಆಮದು ಮಾಡಿದ ಕಲ್ಲಿದ್ದಲನ್ನು ಮಿಶ್ರ ಮಾಡಿ ಬಳಸುವುದರಿಂದ ವಿದ್ಯುತ್ ಉತ್ಪಾದನೆಯಾಗುತ್ತದೆ. ಉತ್ತರಪ್ರದೇಶ ಹಾಗೂ ಪಂಜಾಬ್ ನಡುವೆ ನಮ್ಮದು ವಿನಿಮಯ ಪದ್ಧತಿ ಇದೆ. ಈಗ ಪಡೆದು, ಜೂನ್‌ನಿಂದ ನಾವು ಅವರಿಗೆ ಹಿಂದಿರುಗಿಸುತ್ತೇವೆ. ಯಾವುದೇ ಖಾಸಗಿಯವರಿಂದ ವಿದ್ಯುತ್ ಖರೀದಿಸಿಲ್ಲ ಎಂದು ವಿವರಿಸಿದರು.

## ರಾಜ ನುಡಿ

ನೂರು ಜನಕ್ಕೊಬ್ಬ ನಾಯಕ ಹುಟ್ಟಿಕೊಳ್ಳಬಹುದು. ಸಾವಿರ ಜನಕ್ಕೊಬ್ಬ ಜಾಣ ಮನುಷ್ಯ ಸಿಗಬಹುದು. ಆದರೆ ಲಕ್ಷಕ್ಕೊಬ್ಬ ಸಂತೃಪ್ತ ಮನುಷ್ಯ ಸಿಗುವುದು ದುಸ್ತರ. ಏನಿದೆಯೋ ಅಷ್ಟರಲ್ಲೇ ಇರಲಿ ಸಂತೃಪ್ತಿ.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 228

*ದೇವರ ಸ್ವರೂಪ ಬೆಳಗಿನ ರೂಪ*

*ಅಂಬರದ ಮನೆಯೊಳಗೆ ಸ್ವಯಂಭೂಲಿಂಗವ ಕಂಡೆ ನೋಡಾ!*
*ಆ ಲಿಂಗದೊಳಗೆ ಅನಂತಕೋಟಿ ಸೋಮಸೂರ್ಯರ ಬೆಳಗು ನೋಡಾ!*
*ಆ ಬೆಳಗಿನೊಳು ಕೂಡಿ ತಾನು ತಾನಾಗಿರ್ದನಯ್ಯ ನಿಮ್ಮ ಶರಣನುರ್ಘೋಂಕಾರ ನಿಜಲಿಂಗಪ್ರಭುವೆ.*
*– ಜಕ್ಕಣ್ಣಯ್ಯನವರು*

ಜಕ್ಕಣ್ಣಯ್ಯನವರು ಇಷ್ಟಲಿಂಗದ ಮೂಲಕ ಅನುಭಾವವನ್ನು ಪಡೆದಾಗ ಉಂಟಾದ ಸ್ಥಿತಿಯನ್ನು ಈ ವಚನದಲ್ಲಿ ವಿವ-ರಿಸಿದ್ದಾರೆ. ಅಂಬರದ ಮನೆ ಎಂದರೆ ಅಳಿದು ಹೋಗುವ ಈ ಅಂಗ ಇದರಲ್ಲಿ ಲಿಂಗದ ಸಂಯೋಗದಿಂದ ನಮ್ಮೊಳಗಿನ ಪ್ರಾಣಲಿಂಗದ ದರ್ಶನಸಾಧ್ಯ. ಆ ಪ್ರಾಣಲಿಂಗವನ್ನು ಇಲ್ಲಿ ಸ್ವಯಂಭೂಲಿಂಗವ ಕಂಡೆ ನೋಡಾ! ಎಂದಿರುವರು. ಇದರ ಸ್ವರೂಪವನ್ನು ವಿವರಿಸುತ್ತ, ಆ ಲಿಂಗದೊಳಗೆ ಅನಂತಕೋಟಿ ಸೋಮಸೂರ್ಯರ ಬೆಳಗು ನೋಡಾ! ಎನ್ನುವಲ್ಲಿ ಅಲ್ಲಮರು ಕಂಡ ಅಪರಿಮಿತ ಕತ್ತಲೆಯೊಳಗಿನ ಅನಂತ ಬೆಳಗು, ಬಸವಣ್ಣನವರಿಗೆ ಗೋಚರಿಸಿದ ಅಗಮ್ಯ ಅಪ್ರಮಾಣ ಅನಂತದ ಬೆಳಗಿನ ಲಿಂಗದರ್ಶನವನ್ನು ಜಕ್ಕಣ್ಣನವರು ಕಂಡಿದ್ದಾಗಿ ಹೇಳಿದ್ದಾರೆ. ಆ ಬೆಳಗಿನೊಳಗೆ ತಾವು ಬೆರೆತು ತಮ್ಮನ್ನೇ ಮರೆದ ಅನುಭಾವವನ್ನು ವಚನದಲ್ಲಿ ವಿವರಿಸಿದ್ದಾರೆ. ಇದು ಲಿಂಗಾಂಗಯೋಗ ಇದನ್ನು ಶರಣರು ಅನುಭವಿಸಿ ವಚಿಸಿದವ ಶಬ್ದಗಳೇ ವಚನಗಳಾಗಿವೆ. ಈ ಬೆಳಗಿನ ದರ್ಶನವಾಗುವತ್ತ ನಮ್ಮೆಲ್ಲರ ಲಿಂಗಸಾಧನೆ ಸಾಗಲಿ. ದೇವರ ರೂಪ ಬೆಳಗಿನ ಸ್ವರೂಪ

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಕಾಲುವೆ ಜಾಲಗಳಿಗೆ ನೀರು: ನಿಷೇಧಾಜ್ಞೆ ಜಾರಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಬರುವ ಮಲಪ್ರಭಾ ಪಶ್ಚಿಮ ಕಾಲುವೆ, ಮನಗೂಳಿ ಶಾಖಾ ಕಾಲುವೆ ಮತ್ತು ಬಬಲೇಶ್ವರ ಶಾಖಾ ಕಾಲುವೆ-1 &2ರ ಜಾಲದ ಅಡಿಯಲ್ಲಿ ಬರುವ ಕೆರೆಗಳನ್ನು ಪ್ರತಿಶತ 50ರಷ್ಟು ಭರ್ತಿಗೊಳಿಸಲು ಹಾಗೂ ಅಂತರ್ಜಲ ಮಟ್ಟ ಹೆಚ್ಚಿಸಲು ಸಣ್ಣ ನೀರಾವರಿ ಮತ್ತು ಜಿಲ್ಲಾ ಪಂಚಾಯತ್ ಕೆರೆಗಳಿಗೆ ಕಾಲುವೆ ಜಾಲಗಳ ಕೊನೆಯ ಭಾಗದವರೆಗೆ ನೀರನ್ನು ಹರಿಸಲಾಗುತ್ತಿದ್ದು, ಮುಂಜಾಗ್ರತಾ ಕ್ರಮವಾಗಿ ಕಾಲುವೆಗಳ ಎಡ-ಬಲ 100 ಅಡಿ ವ್ಯಾಪ್ತಿಯಲ್ಲಿ ದಿನಾಂಕ : 04-11-2023 ರಿಂದ 15-11-2023ರವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.



ಕಾಲುವೆ ವ್ಯಾಪ್ತಿಯ ದಡದ 100 ಅಡಿ ಸುತ್ತಮುತ್ತಲಿನ ಪ್ರದೇಶದಲ್ಲಿ ಸಾರ್ವಜನಿಕರು ಗುಂಪು-ಗುಂಪಾಗಿ ಓಡಾಡುವುದನ್ನು ನಿಷೇಧಿಸಿದೆ. ಕಾಲುವೆಗಳಿಂದ ಅಕ್ರಮ ಪಂಪಸೆಟ್-ಸೈಫನ್-ಜಲಚರದಿಂದ ಸೈಫನ್ ಮೂಲಕ ನೀರನ್ನು ಉಪಯೋಗಿಸಕೂಡದು. ಸದರಿ ಕಾಲುವೆಗಳ ವ್ಯಾಪ್ತಿಯಲ್ಲಿ ಕಾಲುವೆಗಳಿಂದ ಅಕ್ರಮ ಪಂಪಸೆಟ್ ಮೂಲಕ ನೀರನ್ನು ಬಳಸುತ್ತಿದ್ದಲ್ಲಿ ಅಂತಹ ಪಂಪಸೆಟ್‌ಗಳ ವಿದ್ಯುತ್ ಸಂಪರ್ಕವನ್ನು ಹೆಸ್ಕಾಂ ಇಲಾಖೆಯವರು ಕಡಿತಗೊಳಿಸಲಿದ್ದಾರೆ. ಕಾಲುವೆ ದಡದ ಸುತ್ತಮುತ್ತಲಿನ 100 ಅಡಿ ಪ್ರದೇಶದಲ್ಲಿ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಕೆರೆ ಹಾಗೂ ಕಾಲುವೆಗಳಿಗೆ ಯಾವುದೇ ರೀತಿ ಹಾನಿ ಮಾಡಕೂಡದು. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಿದೆ.

### ಗ್ರಾಮ ಅಭಿವೃದ್ಧಿ ಸಲಹಾ ಸಮಿತಿ ಸಭೆಯಲ್ಲಿ ಡಿಸಿ ಟಿ.ಭೂಬಾಲನ್ ಸೂಚನೆ

# ತೆರಿಗೆ ಹಣದಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ತೆರಿಗೆಯಿಂದ ಬಂದ ಹಣದಲ್ಲಿ ಮಸೂತಿ, ಕೂಡಗಿ, ತೆಲಗಿ ಮುತ್ತಗಿ & ಗೊಳಸಂಗಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಂತೆ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರೂ ಆದ ಬಸವನಬಾಗೇವಾಡಿ ಮತಕ್ಷೇತ್ರದ ಶಾಸಕ ಶಿವಾನಂದ ಪಾಟೀಲ ಸೂಚಿಸಿದರು.

ಸೋಮವಾರ ಕೂಡಗಿ ಎನ್‌ಟಿಪಿಸಿ ಸಭಾಭವನದಲ್ಲಿ ನಡೆದ 11ನೇ ಗ್ರಾಮ ಅಭಿವೃದ್ಧಿ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸಿದ್ದ ಅವರು, ಇನ್ನೂ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತೀವ್ರವಾಗಿ ಪೂರ್ಣಗೊಳಿಸಬೇಕು ಹಾಗೂ ಬಾಕಿ ಪ್ರಾರಂಭಿಸದೇ ಇರುವ ಕಾಮಗಾರಿಗಳ ಬಗ್ಗೆ ಒಂದು ವಾರದಲ್ಲಿ ಕ್ರಮ ವಹಿಸಿ ಬಳಕೆ ಪ್ರಮಾಣ ಪತ್ರ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚಿಸಲಾಯಿತು.

ಎನ್‌ಟಿಪಿಸಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸ್ಥಳೀಯರನ್ನು ನೇಮಕಾತಿ ಮಾಡಿಕೊಳ್ಳಬೇಕು. ಸವಳು ಜವಳು ಕುರಿತು ಹೈದರಾಬಾದ್ ತಂತ್ರಜ್ಞರ ವರದಿ ಅಂಶ ಪರಿಶೀಲಿಸಿ ಕ್ರಮ ವಹಿಸಬೇಕು. ಬಾಧಿತ ಗ್ರಾಮದ ಗ್ರಾಮಸ್ಥರ ಸಮಸ್ಯೆಗಳ ಪರಿಹಾರಕ್ಕೆ ಸಾರ್ವಜನಿಕ ಸಂಪರ್ಕ ಅಧಿಕಾ-ರಿಗಳನ್ನು ನೇಮಿಸಬೇಕು. ಪುನರವಸತಿ ಮತ್ತು ಪುನರ್ ನಿರ್ಮಾಣದ ಅನುದಾನದಲ್ಲಿ ಆರೋಗ್ಯ ತಾಂತ್ರಿಕ ಶಿಕ್ಷಣಕ್ಕಾಗಿ ಕ್ರಿಯಾ ಯೋಜನೆ ತಯಾರಿಸುವಂತೆ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಲಾಯಿತು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ, ಕೊಲ್ಹಾರ ತಹಶೀಲ್ದಾರ ಸೇರಿದಂತೆ ತಾಲೂಕಿನ ವಿವಿಧ ಇಲಾಖೆ ಅಧಿಕಾರಿಗಳು, ಎನ್‌ಟಿಪಿಸಿ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಲಹಾ ಸಮಿತಿ ಸದಸ್ಯರು ಇತರರು ಉಪಸ್ಥಿತ-ರಿದ್ದರು.

ವಿಜಯಪುರ ಉಪವಿಭಾಗಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ ಸ್ವಾಗತಿಸಿದರು.

# ನ.7 ಕ್ಕೆ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆ



**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಒಂದೆಡೆ ಸ್ಥಗಿತಗೊಂಡಿರುವ ಜಲಾಶಯಗಳ ಒಳಹರಿವು, ಮತ್ತೊಂದೆಡೆ ಕಾಲುವೆಯ ನೀರಿಗಾಗಿ ಹೆಚ್ಚುತ್ತಿರುವ ರೈತರ ಬೇಡಿಕೆ, ಇವುಗಳ ಮಧ್ಯೆ ಕಾಲುವೆಗೆ ನೀರು ಹರಿಸುವ ನಿರ್ಣಯದತ್ತ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರ ಚಿತ್ತ ನೆಟ್ಟಿದೆ.

ಇದಕ್ಕೆಲ್ಲಾ ಉತ್ತರ ಎಂಬಂತೆ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆ ನ.7 ರಂದು ಇಲ್ಲಿಯ ಕೆಬಿಜೆಎನ್ ಎಲ್ ವ್ಯವಸ್ಥಾಪಕ ನಿರ್ದೇಶಕರ ಸಭಾಂಗಣದಲ್ಲಿ ಮಧ್ಯಾಹ್ನ 3 ಕ್ಕೆ ನಡೆಯಲಿದೆ ಎಂದು ಐಸಿಸಿ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಐಸಿಸಿ ಅಧ್ಯಕ್ಷರೂ ಆಗಿರುವ ಸಚಿವ ಆರ್.ಬಿ. ತಿಮ್ಮಾಪುರ ಅಧ್ಯಕ್ಷತೆಯಲ್ಲಿ ಈ ಸಭೆ ಜರುಗಲಿದ್ದು,

ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯ 5 ಜಿಲ್ಲೆಗಳ ಶಾಸಕರು, ಸಚಿವರು, ಸಂಸದರು, ಜಿಲ್ಲಾಧಿಕಾರಿಗಳು,ಕೃಷಿ ಅಧಿಕಾರಿಗಳು ಸದಸ್ಯರಿದ್ದಾರೆ. ಕಾಲುವೆಗೆ ನೀರು ಹರಿಸುವ ಅವಧಿ ಡಿ.4 ರವರೆಗೂ ಇದ್ದು, ಇನ್ನೂ ತಿಂಗಳ ಮೊದಲೇ ಸಭೆ ಕರೆದು, ನೀರು ಕೊಡುವ ಬಗ್ಗೆ ಸ್ಪಷ್ಟ ಉತ್ತರ ಸಭೆ ನೀಡಲಿದೆ.

ನಿತ್ಯವೂ ನೀರಿಗಾಗಿ ಪ್ರತಿಭಟನೆ;

ಆಲಮಟ್ಟಿ, ನಾರಾಯಣಪುರ ಜಲಾಶಯಗಳ ಒಳಹರಿವು ಸ್ಥಗಿತಗೊಂಡು ಹಲವು ದಿನ ಕಂಡಿವೆ. ಆಲಮಟ್ಟಿ ಎಡದಂಡೆ , ಚಿಮ್ಮಲಗಿ ಪೂರ್ವ ಮತ್ತು ಪಶ್ಚಿಮ ಕಾಲುವೆಯಿಂದ ನೀರು ಕೊನೆ ಹಂತಕ್ಕೆ ತಲುಪುತ್ತಿಲ್ಲ ಎಂಬ ದೂರುಗಳು ಸಾಮಾನ್ಯವಾಗಿವೆ. ಕಾಲುವೆ ನೀರು ನಿರ್ವಹಣೆಯಲ್ಲಿ ಈ ಬಾರಿ ಕೆಬಿಜೆಎನ್ ಎಲ್ ಅಧಿಕಾರಿಗಳ ವೈಫಲ್ಯ ಎದ್ದು ಕಾಣುತ್ತಿದೆ. ಕಾಲುವೆಯ ಮೊದಲ ಭಾಗದ ರೈತರು ಬೇಕಾಬಿಟ್ಟಿ ನೀರು ಬಳಸುತ್ತಿದ್ದು, ಕಾಲುವೆಯ ಸರಾಗ ಹರಿಯುವಿಕೆಗೆ ತಡೆ ಒಡ್ಡುತ್ತಿದ್ದಾರೆ.

ಇನ್ನೂ ಕೊನೆ ಭಾಗದ ರೈತರಿಗೆ ನೀರು ತಲುಪುತ್ತಿಲ್ಲ. ಹಿಂಗಾರು ಹಂಗಾಮಿಗೆ ಕೃಷಿಗಾಗಿ ನೀರು ಪೂರೈಕೆಯಿಲ್ಲ ಈಗಾಗಲೇ ಐಸಿಸಿ ಅಧ್ಯಕ್ಷರು ಸ್ಪಷ್ಟ ಪಡಿಸಿದ್ದಾರೆ.

# ಗಾಂಜಾ ಕೇಸ್: ಆರೋಪಿಗೆ ರೂ.50ಸಾವಿರ ದಂಡ, 5 ವರ್ಷ ಶಿಕ್ಷೆ



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಬಿದರಕುಂದಿ ಗ್ರಾಮದ ನಿವಾಸಿ ಗಾಂಜಾ ಪ್ರಕರಣದ ಆರೋಪಿಯೊಬ್ಬನಿಗೆ 5ವರ್ಷ ಜೈಲು ಶಿಕ್ಷೆ ವಿಧಿಸಿ ವಿಜಯಪುರ ಜಿಲ್ಲಾ ಸೆಷನ್ಸ್ ನ್ಯಾಯಾಧೀಶರು ಆದೇಶಿಸಿದ್ದಾರೆ.

2018 ರಲ್ಲಿ ಆರೋಪಿ ಅರ್ಜುನ ಹರಣಶಿಕಾರಿ ನಿಡಗುಂದಿಯಿಂದ ತಾಲೂಕಿನ ಮಾದಿನಾಳ ಗ್ರಾಮ ಮಾರ್ಗವಾಗಿ ಬಿದರಕುಂದಿ ಗ್ರಾಮಕ್ಕೆ ಮೋಟಾರ ಸೈಕಲ್ ಮೇಲೆ ಗಾಂಜಾವನ್ನು ಚೀಲದಲ್ಲಿ ಹಾಕಿ ಕಟ್ಟಿಗೊಂಡು ಹೋಗುವಾಗ ಮುದ್ದೇಬಿಹಾಳ ಪೊಲೀಸರಿಗೆ ಅತಿಥಿಯಾಗಿದ್ದ. ಆರೋಪಿಯನ್ನ ಬಂಧಿಸಿ ಎಫ್ಆಯ್ಆರ್ ದಾಖಲಿಸಿದ್ದರು. ಸದರ ಪ್ರಕರಣ ವಿಚಾರಣೆ ನಡೆಸಿದ ಜಿಲ್ಲಾ ಸೆಷನ್ಸ್ ನ್ಯಾಯಾಲಯ ಆರೋಪಿಗೆ 50ಸಾವಿರ ದಂಡ ಮತ್ತು 5ವರ್ಷ ಜೈಲು ಶಿಕ್ಷೆ ನೀಡಿ ಆದೇಶಿಸಿದೆ.

ಸದರ ಪ್ರಕರಣವನ್ನು ಭೇದಿಸಿ ದಾಳಿ ಕೈಗೊಂಡು ತನಿಖೆ ನಿರ್ವಹಿಸಿದ ಮುದ್ದೇಬಿಹಾಳ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಜಿಲ್ಲಾ ಪೊಲೀಸ್ ಅಧಿಕ್ಷರು ಶ್ಲಾಘಿಸಿದ್ದಾರೆ.

# ಭಕ್ತ ಕನಕದಾಸರ ಮೂರ್ತಿ ಪ್ರತಿಷ್ಠಾಪನೆ




**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ಮದಬಾವಿಯಲ್ಲಿ ಸೋಮವಾರ ಭಕ್ತ ಕನಕದಾಸರ ಮೂರ್ತಿಯ ಪ್ರತಿಷ್ಠಾಪನೆ ಮಾಡಲಾಯಿತು.

ಇದಕ್ಕೂ ಮುನ್ನ ಕನಕದಾಸರ ಮೂರ್ತಿಯನ್ನು ಪ್ರಮುಖ ರಸ್ತೆಗಳ ಮೂಲಕ ಮೆರವಣಿಗೆಯಲ್ಲಿ ತರಲಾಯಿತು. ಮಹಿಳೆಯರಿಂದ ಕುಂಬಮೇಳ ಜರುಗಿತು. ವಿವಿಧ ವಾದ್ಯ ಮತ್ತು ಗೊಂಬೆ ಕುಣಿತ, ಕೋಲಾಟ, ಡೊಳ್ಳಿನ ವಾದ್ಯದೊಂದಿಗೆ ಸಾದು ಮುತ್ಯಾನ ಕಟ್ಟೆಯಿಂದ ಯಲ್ಲಪ್ಪ ಮುತ್ಯಾನ ಗುಡಿಯವರೆಗೆ ಭಕ್ತ ಕನಕದಾಸರ ಮೂರ್ತಿಯ ಮೆರವಣಿಗೆ ಜರುಗಿತು. ನಂತರ ಮೂರ್ತಿಯ ಕುಂಬಾಭಿಷೇಕ ಮತ್ತು ಪುಷ್ಪಾರ್ಚನೆ ಕೂಡ ಜರುಗಿತು.

ಈ ಸಂದರ್ಭದಲ್ಲಿ ಗ್ರಾಮದ ಹಾಲುಮತ ಸಮಾಜ ಮುಖಂಡ ನಿಂಗಪ್ಪ ಪೂಜಾರಿ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು. ಇದೇ ರೀತಿ ರಾಮನಗೌಡ ಬಗಲಿ, ಔದಪ್ಪ ಪೂಜಾರಿ, ರಮೇಶ ಸಿಂದಗಿ, ಭೂತಾಳಿ ಹಿರೇಕುರುಬರ ಅವರನ್ನು ಕೂಡ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಸಾನಿದ್ಯವನ್ನು ಸಿದ್ದರಾಡ ನಂದನೂರಿ ಮಹಾಸ್ವಾಮಿಗಳು ಮತ್ತು ಅತಿಥಿಗಳಾಗಿ ಮಾಜಿ ಶಾಸಕ ಅಪ್ಪು ಪಟ್ಟಣಶೆಟ್ಟಿ, ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ ಉಪಸ್ಥಿತರಿದ್ದರು.

# ರೈಲಿನಡಿ ಬಿದ್ದು ವ್ಯಕ್ತಿ ಆತ್ಮಹತ್ಯೆ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ರೈಲಿನಡಿ ಬಿದ್ದು ವ್ಯಕ್ತಿಯೋರ್ವ ಆತ್ಮಹತ್ಯೆ ಮಾಡಿಕೊಂಡ ಘಟನೆ ಆಲಮಟ್ಟಿ ರೈಲು ನಿಲ್ದಾಣದ ಸಮೀಪ ಭಾನುವಾರ ರಾತ್ರಿ ಸಂಭವಿಸಿದೆ.

ಮೃತ ಯುವಕ ವಿಜಯಪುರ ಬಳಿಯ ಮಖಣಾಪುರ ಗ್ರಾಮದ ನಾಗೇಶ ರಾಮು ತಳೇಕಡೆ (30) ಎಂದು ತಿಳಿದುಬಂದಿದೆ.

ಆಲಮಟ್ಟಿ ರೈಲು ನಿಲ್ದಾಣದ ಸಮೀಪ ರಾತ್ರಿ ಈ ಘಟನೆ ನಡೆದಿದೆ. ವಿಜಯಪುರದ ರೈಲ್ವೆ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಸಚಿವ ದರ್ಶನಾಪೂರ ಜಿಲ್ಲಾ ಪ್ರವಾಸ


**ಉದಯರಶ್ಮಿ ನ್ಯೂಸ್**

ವಿಜಯಪುರ: ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶರಣಬಸಪ್ಪ ದರ್ಶನಾಪೂರ ಅವರು ನವೆಂಬರ್ 7ರ ಮಧ್ಯಾಹ್ನ 12 ಗಂಟೆಗೆ ಪರಸನಹಳ್ಳಿದಿಂದ ತಾಳಿಕೋಟಿ, ಮುದ್ದೇಬಿಹಾಳ ಮಾರ್ಗವಾಗಿ ಹೊರಟು, ಮಧ್ಯಾಹ್ನ 3 ಗಂಟೆಗೆ ಆಲಮಟ್ಟಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದ ಸಭಾಂಗಣದಲ್ಲಿ ನಡೆಯುವ ಕೃಷ್ಣಾ ಮೇಲ್ದಂಡೆ ಯೋಜನೆಯ 2023–24ನೇ ಸಾಲಿನ ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸುವರು.

ಸಂಜೆ 5:30 ಗಂಟೆಗೆ ಆಲಮಟ್ಟಿಯಿಂದ ರಸ್ತೆ ಮೂಲಕ ಕಲಬುರಗಿಗೆ ಪ್ರಯಾಣ ಬೆಳೆಸುವರು ಎಂದು ಪ್ರಕಟಣೆ ತಿಳಿಸಿದೆ.

## ಸಲೀಮಪಟೇಲ್ ಗೆಳೆಯರ ಬಳಗದಿಂದ ಶಾಸಕ ಅಶೋಕ ಮನಗೂಳಿ ಅವರಿಗೆ ಸನ್ಮಾನ

# ವಿದ್ಯುತ್ ಕಾಮಗಾರಿಗೆ ರೂ.5 ಕೋಟಿ ಮಂಜೂರು :ಶಾಸಕ ಮನಗೂಳಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಗೆದ್ದಾಗ ಹಿಗ್ಗುವುದು, ಸೋತಾಗ ಕುಗ್ಗೊದು ಹೇಡಿತನದ ಲಕ್ಷಣ, ಸೋಲೇ ಗೆಲುವಿನ ಸೋಪಾನ. ಸೋಲು ಗೆಲುವು ಎರಡನ್ನೂ ಸಮಾನಾಗಿ ಸ್ವೀಕಾರ ಮಾಡುವವನೇ ನಿಜವಾದ ಜನನಾಯಕ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ಸಲೀಮಪಟೇಲ್ ಮರ್ತೂರ್ ಗೆಳೆಯರ ಬಳಗದ ವತಿಯಿಂದ ಹಮ್ಮಿಕೊಂಡ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಕಳೆದ ಉಪಚುನಾವಣೆಯಲ್ಲಿ ಸೋಲಿನ ಅನುಭವ ಪಡೆದ ನನಗೆ ಸಾಕಷ್ಟು ಮಾನಸಿಕ ಒತ್ತಡದಿಂದ ರಾಜಕೀಯ ಜೀವನವೇ ಸಾಕೆನ್ನುವಷ್ಟು ನೋವಾಗಿತ್ತು. ಆ ಸಮಯದಲ್ಲಿ ನನಗೆ ತಂದೆ ದಿ.ಎಂ.ಸಿ ಮನಗೂಳಿ ಅವರು ಹೇಳಿದ ಮಾತುಗಳು ನೆನಪಿಗೆ ಬಂದು ಬಲ ತುಂಬಿದವು. ಅವರು ತೋರಿದ ಮಾರ್ಗ ಬಿಡಬಾರದು ಎಂದು ಹಗಲು ರಾತ್ರಿಯೆನ್ನದೆ ಹಳ್ಳಿಗಳಲ್ಲಿ ಸಂಚರಿಸಿ 270 ಭೂತಮಟ್ಟದಲ್ಲಿ ಸಂಘಟನೆ ಮಾಡಿದ ಪ್ರಯತ್ನಕ್ಕೆ ಇಂದು ಈ ಸನ್ಮಾನ ದೊರೆತಿದೆ. ಈ ಗೆಲುವು ನನ್ನದಲ್ಲ, ಸಮಸ್ತ ಕ್ಷೇತ್ರದ ಜನರ ಗೆಲುವು ಎಂದು ಹೇಳಿದರು.

> "ಪಟ್ಟಣದ ಮರ್ತೂರ್ ಕುಟುಂಬ ಪೂರ್ವಜರಿಂದಲೂ ಸಹ ವ್ಯಾಪಾರ ಉದ್ಯೋಗ ನಂಬಿಕೊಂಡು ಸರ್ವ ಜನಾಂಗದ ಜೊತೆಗೆ ಅನೋನ್ಯವಾಗಿ ನಡೆದುಕೊಂಡು ಬಂದಿದೆ. ನಮ್ಮ ತಂದೆಯವರು ಎರಡು ಬಾರಿ ಈ ಭಾಗದ ಶಾಸಕರಾಗಿ ಸಚಿವರಾಗಿದ್ದು ಅದರಲ್ಲಿ ಈ ಕುಟುಂಬದ ಶ್ರಮ ಕೂಡಾ ಇದೆ."
>
> **– ಅಶೋಕ್ ಮನಗೂಳಿ, ಶಾಸಕರು**

ನಗರದಲ್ಲಿ ವಿದ್ಯುತ್ ಕಂಬ ಹಾಗೂ ವಿದ್ಯುತ್ ಜ್ಯೋತಿ ಅಳವಡಿಕೆಗೆ ರೂ. 5 ಕೋಟಿ ಮಂಜೂರಾಗಿದ್ದು ಶೀಘ್ರದಲ್ಲಿಯೇ ಕಾಮಗಾರಿ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಡಿಎಸ್ಎಸ್ ಜಿಲ್ಲಾ ಸಂಚಾಲಕ ವಾಯ್.ಸಿ ಮಯೂರ, ಕಾಂಗ್ರೆಸ್ ಮುಖಂಡ ಸಾದಿಕ್ ಸುಂಬಡ, ಸಿದ್ದಲಿಂಗ ಚೌಧರಿ, ವರದಿಗಾರ ಯುಸುಫ್ ನೇವಾರ ಮಾತನಾಡಿದರು.

ಈ ವೇಳೆ ತಹಸೀಲ್ದಾರ್ ಪ್ರದೀಪಕುಮಾರ ಹಿರೇಮಠ್, ಹೆಸ್ಕಾಮ್ ಅಧಿಕಾರಿ ಚಂದ್ರಕಾಂತ ನಾಯಕ್, ಡಾ.ಚನ್ನವೀರ ಮನಗೂಳಿ, ಸೈಫನ್ ನಾಟೀಕಾರ, ಹಾಸಿಂಪೀರ ಆಳಂದ, ಮಹ್ಮದ್ ಪಟೇಲ್ ಬಿರಾದಾರ, ಬಂದೇನವಾಜ ಶಾಹಪೂರ, ಅಲ್ತಾಫ ಬಾಗವಾನ, ರಾಜಶೇಖರ ಚೌರ, ರಜತ ತಾಂಬೆ, ಬಸೀರ ಮರ್ತೂರ, ಧರ್ಮರಾಜ ಯಂಟಮಾನ, ಅಲ್ಲಿಸಾಬ ಮರ್ತೂರ, ಬಾಬುಸಾಬ ಮರ್ತೂರ, ಅಬ್ಬಾಸಲಿ ಬಾಗವಾನ ಅಬೂಬಕರ್ ಡೋಣಿ, ಬಸ್ಸು ಕಾಂಬಳೆ, ಸಲೀಮ್ ಕಣ್ಣಿ, ಹಾಗೂ ಸಲೀಮ್ ಪಟೇಲ್ ಸ್ನೇಹ ಬಳಗ ಸೇರಿದಂತೆ ಅನೇಕರು ಇದ್ದರು.

# ಜಗದಂಬಾ ಪ್ರೌಢಶಾಲೆ ವಿದ್ಯಾರ್ಥಿನಿಯರು ರಾಜ್ಯಮಟ್ಟಕ್ಕೆ ಆಯ್ಕೆ



**ಉದಯರಶ್ಮಿ ನ್ಯೂಸ್**


ದೇವರಹಿಪ್ಪರಗಿ: ಹಿಟ್ಟಿನಹಳ್ಳಿ ಎಲ್.ಟಿ ಜಗದಂಬಾ ಪ್ರೌಢಶಾಲೆಯ ವಿದ್ಯಾರ್ಥಿನೀಯರು ವಿಭಾಗಮಟ್ಟದ ಫುಟ್‌ಬಾಲ್ ಸ್ಪರ್ಧೆಯಲ್ಲಿ ದ್ವಿತಿಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ತಾಲ್ಲೂಕಿನ ಹಿಟ್ಟಿನಹಳ್ಳಿ ಎಲ್.ಟಿಯ ಜಗದಂಬಾ ಪ್ರೌಢಶಾಲೆಯ ವಿದ್ಯಾರ್ಥಿನೀಯರು ವಿಜಯಪುರ ಸೈನಿಕಶಾಲೆಯಲ್ಲಿ ಜರುಗಿದ ವಿಭಾಗೀಯ ಮಟ್ಟದ ಫುಟ್‌ಬಾಲ್ ಸ್ಪರ್ಧೆಯಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ತಂಡದ ಗೆಲುವಿನಲ್ಲಿ ಆಟಗಾರ್ತಿಯರಾದ ಕವಿತಾ ರಾಠೋಡ, ಕೀರ್ತಿ ರಾಠೋಡ, ರಮ್ಯಾ ಜಾಧವ, ಕಾವೇರಿ ರಾಠೋಡ, ಶ್ರೇಯಾ ಪವಾರ, ರೇಖಾ ರಾಠೋಡ, ಅಂಜಲಿ ನಾಯಕ ರವರು ಪ್ರಮುಖ ಪಾತ್ರವಹಿಸಿದ್ದು, ಇದೇ ದಿ: 18 ರಂದು ಬೆಂಗಳೂರಿನಲ್ಲಿ ಜರುಗುವ ರಾಜ್ಯಮಟ್ಟದ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲಿದ್ದಾರೆ.

ತಂಡದ ಆಟಗಾರ್ತಿಯರ ಗೆಲುವಿಗೆ ಸಂಸ್ಥೆಯ ಕಾರ್ಯದರ್ಶಿ ರವಿಕುಮಾರ ಚವ್ಹಾಣ, ಮುಖ್ಯಗುರು ಪಿ.ಎಚ್.ಜಂಗಮಶೆಟ್ಟಿ, ಸಂಸ್ಥೆಯ ಕಾಲೇಜಿನ ಪ್ರಾಚಾರ್ಯ ಬಿ.ಎಫ್. ತಳವಾರ, ದೈಹಿಕ ಶಿಕ್ಷಕ ಸಂತೋಷ ಅಂಗಡಿ, ಅರವಿಂದ ಅಂಗಡಿ, ಎಸ್.ಕೆ.ದೊಡಮನಿ, ಪ್ರಕಾಶ ಅಂಗಡಿ ಸೇರಿದಂತೆ ಸಿಬ್ಬಂದಿ ಸನ್ಮಾನಿಸಿ, ಶುಭಹಾರೈಸಿದ್ದಾರೆ.

# ಸಾತ್ವಿಕತೆಯ ಬದುಕಿಗೆ ಅಧ್ಯಾತ್ಮಿಕ ಸಂಸ್ಕೃತಿ ಅಗತ್ಯ



**ಉದಯರಶ್ಮಿ ನ್ಯೂಸ್**

ಇಂಡಿ: ಜ್ಞಾನದ ಹಸಿವು ಎಲ್ಲರಲ್ಲಿರಬೇಕು. ಅಧ್ಯಾತ್ಮಿಕ ಸಂಸ್ಕೃತಿಯೊಂದಿಗೆ ವೈಚಾರಿಕತೆಯನ್ನು ಬೆಳೆಸಿಕೊಳ್ಳಬೇಕು. ಎಲ್ಲರೂ ತಮ್ಮ ಮನಸ್ಸನ್ನು ಶುದ್ಧವಾಗಿಟ್ಟುಕೊಳ್ಳಬೇಕು. ನಿತ್ಯ ಯೋಗ, ಧ್ಯಾನ ಮಾಡುತ್ತಾ, ಸಾತ್ವಿಕತೆಯ ಬದುಕನ್ನು ರೂಢಿಸಿಕೊಳ್ಳಬೇಕು ಎಂದು ಅಥರ್ಗಾ ಗುರುದೇವಾಶ್ರಮದ ಈಶಪ್ರಸಾದ ಸ್ವಾಮಿಗಳು ಹೇಳಿದರು.

ರವಿವಾರ ಸಂಜೆ ತಾಲೂಕಿನ ಅಥರ್ಗಾ ಗ್ರಾಮದ ಹನುಮಾನ ದೇವಸ್ಥಾನದಲ್ಲಿ ನೂತನವಾಗಿ ಪ್ರತಿಷ್ಠಾಪಿಸಲ್ಪಟ್ಟ ನವಗ್ರಹ ಮೂರ್ತಿಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಇಂದಿನ ಮಕ್ಕಳು ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ಅಧ್ಯಾತ್ಮಿಕ ಪ್ರವಚನಗಳನ್ನು ಆಲಿಸಬೇಕು. ಗುರು ಹಿರಿಯರನ್ನು ಗೌರವಿಸುತ್ತಾ, ಪ್ರೀತಿ, ವಿಶ್ವಾಸ, ಸಹಕಾರದಿಂದಲೇ ಸಮಾಜದ ಒಳಿತಿಗೆ ದುಡಿಯಬೇಕು ಎಂದು ಹೇಳುತ್ತಾ ನವಗ್ರಹ ಪೂಜೆಯ ಮಹತ್ವವನ್ನು ತಿಳಿಸಿದರು.

ನಿವೃತ್ತ ಶಿಕ್ಷಕ ಆರ್ ವ್ಹಿ ಪುರೋಹಿತ ಮಾತನಾಡಿ,

ಯುವಕರೇ ಸಮಾಜದ ನಿಜವಾದ ಸಂಪತ್ತು. ಯುವ ಸಮೂಹಕ್ಕೆ ಸಾಂಸ್ಕೃತಿಕ, ಧಾರ್ಮಿಕ ಚಿಂತನೆಗಳ ಮೌಲ್ಯಗಳು ಅಗತ್ಯ. ಅಧ್ಯಾತ್ಮಿಕ ಶಿಕ್ಷಣವನ್ನು ಜೀವನದಲ್ಲಿ ರೂಢಿಸಿಕೊಳ್ಳಬೇಕು. ಆಗಲೇ ಮನುಷ್ಯ ಮನುಷ್ಯನಾಗಿ ಬಾಳಲು ಸಾಧ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ದೇವಸ್ಥಾನ ಸಮಿತಿ ಅಧ್ಯಕ್ಷ ಶಿವು ನಿಂಬಾಳ ಮಾತನಾಡಿ, ದೈವಭಕ್ತಿ ಇರುವ ಕಡೆ ಮನುಷ್ಯ ತನ್ನ ಜೀವನದ ಗುರಿಯನ್ನು ಸಾಧಿಸಬಲ್ಲ. ಪ್ರತಿಯೊಬ್ಬರು ಆಧ್ಯಾತ್ಮಿಕತೆಗಾಗಿ ಸಮಯ ಮೀಸಲಿಡಬೇಕು ಎಂದು ಹೇಳಿದರು.

ಶಿಕ್ಷಕ ಸಿ ಎಸ್ ಮೇತ್ರಿ ಕಾರ್ಯಕ್ರಮ ನಿರ್ವಹಿಸಿದರು.

ರೇವಪ್ಪ ಕನ್ನೂರ, ಬಾಬು ಶಿವಣಗಿ, ಪರಶುರಾಮ ಶಿವಣಗಿ,

ಡಾ.ಪರಶುರಾಮ ಕನ್ನೂರ, ಸಿದ್ದಪ್ಪ ಶೇಟಗಾರ, ಸಂತೋಷ ಮೊಸಲಗಿ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

# ಡಿಸೆಂಬರ್‌ನಲ್ಲಿ ರಾಜ್ಯ ಸರ್ಕಾರ ದಿವಾಳಿ :ಯತ್ನಾಳ ಭವಿಷ್ಯ

**ಉದಯರಶ್ಮಿ ನ್ಯೂಸ್**

ಚಾಮರಾಜನಗರ: ಡಿಸೆಂಬರ್‌ನಲ್ಲಿ ರಾಜ್ಯ ಸರ್ಕಾರ ದಿವಾಳಿ ಆಗಲಿದೆ ಹಾಗೂ ಆರೋಗ್ಯ ಸರಿಯಾದ ಬಳಿಕ ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಜೈಲೂಟ ಫಿಕ್ಸ್ ಎಂದು ಶಾಸಕ ಬಸವನಗೌಡ ಯತ್ನಾಳ್ ಚಾಮರಾಜನಗರದಲ್ಲಿ ಭವಿಷ್ಯ ನುಡಿದಿದ್ದಾರೆ.

ಚಾಮರಾಜನಗರದಲ್ಲಿ ಬರ ಅಧ್ಯಯನ ನಡೆಸಿ ಮಾಧ್ಯಮವರೊಟ್ಟಿಗೆ ಮಾತನಾಡಿದ ಅವರು, ಡಿಸೆಂಬರ್ ವೇಳೆಗೆ ರಾಜ್ಯ ಸರ್ಕಾರ ದಿವಾಳಿ ಆಗುತ್ತದೆ. ಸಿಎಂ ಸಿದ್ದರಾಮಯ್ಯ ಕುರ್ಚಿ ಉಳಿಸಿಕೊಳ್ಳಲು ಹೆಣಗಾಡುತ್ತಿದ್ದಾರೆ, ಮತ್ತೊಬ್ಬರು ಸಿಎಂ ಆಗುತ್ತೇನೆ ಎಂಬ ಕನಸಿನಲ್ಲಿದ್ದಾರೆ ಎಂದು ಲೇವಡಿ ಮಾಡಿದರು.

ರಾಜ್ಯ ಸರ್ಕಾರ ಇದುವರೆಗೆ ಬರದ ಬಗ್ಗೆ ಸರಿಯಾಗಿ ಮಾಹಿತಿ ಸಂಗ್ರಹಿಸಿಲ್ಲ, ಒಂದೊಂದು ಬಾರಿ ಒಂದೊಂದು ವರದಿ ಕೊಡುತ್ತಿದ್ದಾರೆ. ರಾಜ್ಯಕ್ಕೆ ಬರಗಾಲ ಸಿಎಂ ಸಿದ್ದರಾಮಯ್ಯ ಅವರ ಕೊಡುಗೆ, ಸಿದ್ದರಾಮಯ್ಯ ಅವರ ಕಾಲ್ಗುಣದಿಂದ ರಾಜ್ಯಕ್ಕೆ ಬರ ಬಂದಿದೆ ಎಂದು ಟೀಕಿಸಿದರು.



ನಾವು ಇಂದು ಚಾಮರಾಜನಗರ ಜಿಲ್ಲೆಯಲ್ಲಿ ಬರ ಅಧ್ಯಯನ ಆರಂಭಿಸಿದ್ದೇವೆ, ನಾವು ಬಂದ ಮೇಲೆ ನಮ್ಮ ಕಾಲ್ಗುಣದಿಂದ ಈಗ ಮಳೆ ಬಂದಿದೆ, ನಾಳೆ ಮೈಸೂರಿನಲ್ಲಿ ಅಧ್ಯಯನ ಮಾಡುತ್ತೇವೆ, ಈಗಾಗಲೇ ಬೆಳೆ ನಷ್ಟ ಅನುಭವಿಸಿರುವ ರೈತರ ಹೊಲಗಳಿಗೆ ಭೇಟಿ ನೀಡಿದ್ದೇವೆ. ಸಾಕಷ್ಟು ಕಡೆ ಬೆಳೆ ನಷ್ಟ ಆಗಿದೆ. ಬೆಳೆದ ಬೆಳೆಗೆ ಸರಿಯಾದ ಬೆಲೆ ಸಿಗುತ್ತಿಲ್ಲ ಎಂದರು.

ಬರ ಪರಿಸ್ಥಿತಿಯಲ್ಲಿ ನೊಂದ ರೈತರ ನೆರವಿಗೆ ಸರ್ಕಾರ ಮುಂದಾಗಿಲ್ಲ, ಎಸ್ಸಿಪಿ/ಟಿಎಸ್ಪಿ ಸೇರಿದಂತೆ ಎಲ್ಲಾ ಹಣವನ್ನು ಗ್ಯಾರಂಟಿ ಯೋಜನೆಗೆ ಬಳಸಿಕೊಂಡಿದ್ದಾರೆ ಎಂದು ಕಿಡಿಕಾರಿದರು.

25 ಜನ ಸಂಸದರು ಕೇಂದ್ರದಿಂದ ಬರ ಪರಿಹಾರ ಕೊಡಿಸಲಿ ಎಂಬ ಸಿಎಂ ಹೇಳಿಕೆ ವಿಚಾರಕ್ಕೆ ಮಾತನಾಡಿ, ಬರ ಪರಿಸ್ಥಿತಿ ವಿಚಾರವಾಗಿ ಅವರು ಸಭೆ ಕರೆಯಲಿಲ್ಲ. ಸಂಸದರ ಸಭೆ ಕರೆದು ಬರದ ಬಗ್ಗೆ ಚರ್ಚೆ ನಡೆಸಿಲ್ಲ, ಸಂಸದರ ಬಗ್ಗೆ ಮಾತನಾಡುವ ನೈತಿಕತೆ ಸಿಎಂ ಸಿದ್ದರಾಮಯ್ಯಗೆ ಇಲ್ಲ ಎಂದು ಆಕ್ರೋಶ ಹೊರಹಾಕಿದರು.

**ಉದಯರಶ್ಮಿ ನೀವೂ ಬರೆಯಿರಿ..**

ನಿಮ್ಮೂರಿನ, ನಿಮ್ಮ ಸುತ್ತಮುತ್ತಲಿನ ಸಮಸ್ಯೆಗಳ ಮೇಲೆ ನೀವೂ ಬೆಳಕು ಚೆಲ್ಲಬಹುದು, ಸಾಮಾಜಿಕ ಸಮಸ್ಯೆಗಳು ಹಾಗೂ ಮಾನವಿಯ ಕಳಕಳಿಯ ಬರಹಗಳನ್ನು ಸಂಬಂಧಿಸಿದ ಫೋಟೊದೊಂದಿಗೆ ನಮಗೆ ಕಳುಹಿಸಿ, 'ಉದಯರಶ್ಮಿ' ದಿನಪತ್ರಿಕೆಯಲ್ಲಿ ಆದ್ಯತೆಯ ಮೇಲೆ ಪ್ರಕಟಿಸಲಾಗುವುದು.

– ಸಂಪಾದಕ

ಇಲ್ಲಿ ಕಳುಹಿಸಿ.. **Whatsapp : 7026028778**

**email: editor.udayarashmi@gmail.com**

## ಡಿಸಿಎಂ ಡಿ.ಕೆ.ಶಿವಕುಮಾರ್ ಈಗ ಬಂಡೆಯಲ್ಲ ಜಲ್ಲಿಕಲ್ಲು :ಯತ್ನಾಳ್ ವ್ಯಂಗ್ಯ

# ಪರೀಕ್ಷೆ ಅಕ್ರಮದಲ್ಲಿ ಕಾಂಗ್ರೆಸ್ ಕಿಂಗ್‌ಪಿನ್ :ಶಾಸಕ ಯತ್ನಾಳ

**ಉದಯರಶ್ಮಿ ನ್ಯೂಸ್**

ಚಾಮರಾಜನಗರ: ಡಿಸಿಎಂ ಡಿ.ಕೆ.ಶಿವಕುಮಾರ್ ಈಗ ಬಂಡೆಯಲ್ಲ ಜಲ್ಲಿಕಲ್ಲು ಎಂದು ಬಿಜೆಪಿ ಶಾಸಕ ಬಸನಗೌಡ ಯತ್ನಾಳ್ ವ್ಯಂಗ್ಯ ಮಾಡಿದ್ದಾರೆ.

ಚಾಮರಾಜನಗರ ಜಿಲ್ಲೆಯಲ್ಲಿ ಬರ ಅಧ್ಯಯನ ಪ್ರವಾಸ ಮುಗಿಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕರು ಯಾರೂ ಡಿ.ಕೆ.ಶಿವಕುಮಾರ್ ಮಾತನ್ನು ಕೇಳುತ್ತಿಲ್ಲ. ರಾಜ್ಯಾಧ್ಯಕ್ಷರಿಗೆ ಯಾರೂ ಕ್ಯಾರೆ ಎನ್ನುತ್ತಿಲ್ಲ. ಡಿಕೆಶಿ ಪೂರ್ತಿ ವೀಕ್ ಆಗಿದ್ದು, ಕಾಂಗ್ರೆಸ್ ಶಾಸಕರು ಬಂಡೆಯನ್ನು ಒಡೆದು ಜಲ್ಲಿಕಲ್ಲು ಮಾಡಿದ್ದಾರೆ ಎಂದು ವ್ಯಂಗ್ಯ ಮಾಡಿದರು.




ಇನ್ನು, ಇದೇ ವೇಳೆ ಡಿ.ಕೆ.ಶಿವಕುಮಾರ್ ಅವರನ್ನು ಜೈಲಿಗೆ ಕಳುಹಿಸಲು ಅವರ ಪಕ್ಷದಲ್ಲೇ ವಕೀಲರನ್ನು ಸಂಪರ್ಕ ಮಾಡುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಜಾಮೀನನ್ನು ರದ್ದುಪಡಿಸಲು ಕೆಲವರು ವಿಮಾನದಲ್ಲಿ ತೆರಳಿದ್ದಾರೆ ಎಂದರು.

ಆಪರೇಷನ್ ಹಸ್ತ ಸಂಬಂಧ ಮಾತನಾಡಿದ ಅವರು, ಜಗದೀಶ್ ಶೆಟ್ಟರ್ ಬಿಜೆಪಿ ಮಾಜಿ ಶಾಸಕರನ್ನು ಸೆಳೆಯುವ ಹಲ್ಕಾ ಕೆಲಸ ಬಿಡಬೇಕು. ಗ್ರಾಪಂ ಅಧ್ಯಕ್ಷರಾಗಲು ಯೋಗ್ಯವಿಲ್ಲದಿದ್ದರೂ, ಬಿಜೆಪಿ ಅವರನ್ನು ಸಿಎಂ ಮಾಡಿತ್ತು. ಮಂತ್ರಿ ಮಾಡಿತ್ತು. ಸ್ಪೀಕರ್, ರಾಜ್ಯಾಧ್ಯಕ್ಷ ಸ್ಥಾನ ಕೊಟ್ಟಿತ್ತು. ಈಗ ಕಾಂಗ್ರೆಸ್‌ಗೆ ಹೋಗಿ ಬಿಜೆಪಿ ಬಗ್ಗೆ ಮಾತನಾಡುತ್ತಿದ್ದಾರೆ. ಕಿರಾಣಿ ಅಂಗಡಿ ತೆರೆದು ಶಾಸಕರನ್ನು ವ್ಯಾಪಾರ ಮಾಡುವ ಕೆಲಸಕ್ಕೆ ಇಳಿದಿದ್ದಾರೆ. ಈ ಹಲ್ಕಾ ಕೆಲಸ ಮೊದಲು ಬಿಡಬೇಕು ಎಂದು ಯತ್ನಾಳ್ ವಾಗ್ದಾಳಿ ನಡೆಸಿದರು.

ಬಿಜೆಪಿಯಲ್ಲಿ ವಿ.ಸೋಮಣ್ಣ ಅವರನ್ನು ಕಡೆಗಣಿಸಲಾಗುತ್ತಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಯತ್ನಾಳ್, ಸೋಮಣ್ಣ ಅವರನ್ನು ಬಿಜೆಪಿ ಕಡೆಗಣಿಸಿಲ್ಲ. ಅವರಿಗೆ ಮುಂದೆ ಪಕ್ಷದಲ್ಲಿ ಒಳ್ಳೆಯ ಗೌರವಯುತ ಸ್ಥಾನ ಕಾದಿದೆ. ಸೋಮಣ್ಣ ಕಾಂಗ್ರೆಸ್‌ಗೆ ಹೋದರೆ ಮಣ್ಣು ತಿನ್ನಬೇಕು ಅಷ್ಟೇ. ಅವರೇ 136 ಜನ ಇದ್ದಾರೆ ಅವರಿಗೆ ಸರಿಯಾದ ಸ್ಥಾನ ಸಿಕ್ಕಿಲ್ಲ, ಇನ್ನು ಸೋಮಣ್ಣ ಹೋದರೆ ಅವರಿಗೇನು ಸಿಗುತ್ತದೆ ಎಂದು ಪ್ರಶ್ನಿಸಿದರು.

ಈಗ ನಮಗೆ ಲೋಕಸಭೆ ಚುನಾವಣೆ ಅಷ್ಟೇ ಬೇಕು. ಮೋದಿ ಮತ್ತೊಮ್ಮೆ ಪಿಎಂ ಆಗಲು ಹಗಲು ರಾತ್ರಿ ದುಡಿಯಬೇಕು.

ಭಾರತ ಭಾರತವಾಗಿ ಉಳಿಯಬೇಕು. ಭಾರತ ಮತ್ತೊಂದು ಇಸ್ರೇಲ್ ವಿರುದ್ಧ ಹೋಗಿರುವ ಹಮಾಸ್ ಆಗಬಾರದು. ಅದಕ್ಕಾಗಿ 2024ಕ್ಕೆ ಮತ್ತೊಮ್ಮೆ ನರೇಂದ್ರ ಮೋದಿ ಪ್ರಧಾನಿ ಆಗಬೇಕು ಎಂದರು.

ಎಲ್ಲಾ ಅಕ್ರಮದ ಕಿಂ–ಗ್‌ಪಿನ್‌ಗಳೆಲ್ಲರೂ ಕಾಂಗ್ರೆಸ್‌ನವರು. ಪಿಎಸ್‌ಐ ಹಗರಣ ವಿಚಾರದಲ್ಲಿ ಪ್ರಿಯಾಂಕ್ ಖರ್ಗೆ ಬಿಜೆಪಿ ವಿರುದ್ಧ ಮಾತನಾಡುತ್ತಿದ್ದರು. ಈಗ ನಿಮ್ಮದೇ ಸರ್ಕಾರ ಇದೆ ಸಿಬಿಐ ತನಿಖೆ ಮಾಡಿ. ನೀವು ಐದು ತಿಂಗಳಾದರೂ ಯಾವ ತನಿಖೆ ಮಾಡಿಲ್ಲ. ನಿಮಗೆ ಧಮ್, ತಾಖತ್ ಇದ್ರೆ ತನಿಖೆ ಮಾಡಿಸಿ ಎಂದು ಸವಾಲು ಹಾಕಿದರು.

ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಏನೇನೋ ಮಾಡುತ್ತೇನೆ ಎಂದು ಹೇಳುತ್ತಿದ್ದರು. ಈಗ ಪ್ರಿಯಾಂಕ್ ಖರ್ಗೆ ಎಲ್ಲಿಗೆ ಹೋದರು. ಕಾಂಗ್ರೆಸ್ ಪಕ್ಷದವರೇ ಅಕ್ರಮದ ಕಿಂಗ್‌ಪಿನ್ ಆಗಿದ್ದಾರೆ. ಇದೆಲ್ಲಾ ನೋಡಿದರೆ ಪಿಎಸ್‌ಐ ಹಾಗೂ ಕೆಎಇ ಪರೀಕ್ಷಾ ಹಗರಣದಲ್ಲಿ ಪ್ರಿಯಾಂಕ್ ಖರ್ಗೆ ಕೈವಾಡ ಇದೆ ಎನಿಸುತ್ತದೆ ಎಂದು ಯತ್ನಾಳ್ ಶಂಕೆ ವ್ಯಕ್ತಪಡಿಸಿದರು.

# ರಾಜಕೀಯದಲ್ಲಿನ್ನೂ ಕಣ್ಣು ಬಿಡದ ಪ್ರಿಯಾಂಕ್ :ಈಶ್ವರಪ್ಪ ವ್ಯಂಗ್ಯ

**ಉದಯರಶ್ಮಿ ನ್ಯೂಸ್**

ಬಳ್ಳಾರಿ: ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ಆರು ತಿಂಗಳಲ್ಲೇ ನಾಯಕತ್ವ ಅಥವಾ ಮುಖ್ಯಮಂತ್ರಿ ಬದಲಾವಣೆ ಚರ್ಚೆಯಿಂದ ಲೇವಡಿಗೊಳಗಾಗಿದೆ. ಲೋಕಸಭಾ ಚುನಾವಣೆ ಹೊಸ್ತಿಲಲ್ಲೇ ಈ ವಿಚಾರದಿಂದ ವಿಪಕ್ಷಗಳ ಕೈಗೆ ಹೊಸ ಅಸ್ತ್ರ ನೀಡಿದಂತಾಗಿದೆ.



ಕಾಂಗ್ರೆಸ್‌ನ ನಾನೇ ಸಿಎಂ ವಿವಾದದ ಬಗ್ಗೆ ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ಪ್ರತಿಕ್ರಿಯಿಸಿದ್ದು, ರಾಜಕೀಯದಲ್ಲಿ ಇನ್ನೂ ಕಣ್ಣು ಬಿಡದ ಪ್ರಿಯಾಂಕ್ ಖರ್ಗೆ ನಾನು ಸಿಎಂ ಅಂತಾರೆ ಎಂದು ಕಾಂಗ್ರೆಸ್ ನಾಯಕ ವಿರುದ್ಧ ವ್ಯಂಗ್ಯವಾಡಿದ್ದಾರೆ.

ಬಳ್ಳಾರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಎಲ್ಲರೂ ಮುಖ್ಯಮಂತ್ರಿಯಾಗುವವರೇ? ನಾನು ಮುಖ್ಯಮಂತ್ರಿ ನಾನು ಮುಖ್ಯಮಂತ್ರಿ ಎಂದು 224 ಜನರು ಹೇಳುತ್ತಿದ್ದಾರೆ. ಇನ್ನೂ ರಾಜಕಾರಣದಲ್ಲಿ ಕಣ್ಣು ಬಿಟ್ಟಿಲ್ಲ, ಪ್ರಿಯಾಂಕ್ ಖರ್ಗೆ ನಾನು ಸಿಎಂ ಎನ್ನುತ್ತಾರೆ. ಅವರಪ್ಪನ ಹೆಸರು ಹೇಳಿದ್ದರೆ ಒಪ್ಪಿಕೊಳ್ಳುತ್ತಿದ್ದೆ. ಆದರೆ ನಾನೇ ಸಿಎಂ ಅಂತಾನೆ ಮಗ ಎಂದು ಪ್ರಿಯಾಂಕ್ ಖರ್ಗೆ ವಿರುದ್ಧ ಲೇವಡಿ ಮಾಡಿದ್ದಾರೆ.

ಕಾಂಗ್ರೆಸ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆಗೆ ಮುಖ್ಯಮಂತ್ರಿ ಆಗಲು ಬಿಟ್ಟಿಲ್ಲ. ಇನ್ನು ಇವರನ್ನು ಬಿಡುತ್ತಾರಾ. ಸತೀಶ್ ಜಾರಕಿಹೊಳಿ ಅವರು ಕೂಡ ಸಿಎಂ ರೇಸ್‌ನಲ್ಲಿದ್ದಾರೆ ಎನ್ನುತ್ತಾರೆ. ಇನ್ನೂ ಜಿ. ಪರಮೇಶ್ವರ ಅವರು ಮುಖ್ಯಮಂತ್ರಿಯಾಗಲಿ ಎಂದು ಸಚಿವ ಕೆ.ಎನ್ ರಾಜಣ್ಣ ಹೇಳುತ್ತಿದ್ದಾರೆ. ಪರಮೇಶ್ವರ ದೇವರ ಅನುಗ್ರಹ ಇದ್ದರೆ ಸಿಎಂ ಆಗುತ್ತೇನೆ ಎನ್ನುತ್ತಾರೆ. ದೇವರನ್ನು ಬೈಯುವ ಕಾಂಗ್ರೆಸ್‌ನವರು ಇದೀಗ ದೇವರು ಎನ್ನುತ್ತಾರೆ ಎಂದರು.

ಸಂವಿಧಾನ ತಿದ್ದುಪಡಿ ಮಾಡಿ ಜಾತಿಗೊಂದು ಮುಖ್ಯಮಂತ್ರಿ ಮಾಡಲಿ. ಪರಮೇಶ್ವರ ಮತ್ತು ಖರ್ಗೆಗಾಗಿ ಅದೊಂದು ಜಾತಿಗೆ ಎರಡು ಸಿಎಂ ಕೊಡಲಿ ನಮ್ಮ ಅಭ್ಯಂತರವಿಲ್ಲ. ಮಾನ ಮರ್ಯಾದೆ ಇಲ್ಲದ ಮುಖ್ಯಮಂತ್ರಿ ಬಗ್ಗೆ ಮಾತನಾಡಲ್ಲ ಎಂದ ಸಿದ್ದರಾಮಯ್ಯ ಇಂದು ನಾನೇ ಮುಖ್ಯಮಂತ್ರಿ ನಾನೇ ಮುಖ್ಯಮಂತ್ರಿ ಎನ್ನುತ್ತಾರೆ. ನಂತರ ಉಲ್ಟಾ ಹೊಡೆಯುತ್ತಾರೆ ಎಂದು ಸಿದ್ದರಾಮಯ್ಯ ವಿರುದ್ಧ ಕೆ.ಎಸ್ ಈಶ್ವರಪ್ಪ ವಾಗ್ದಾಳಿ ನಡೆಸಿದ್ದಾರೆ.


# ಕನ್ನಡ ಭಾಷೆ ನಾಶವಾದರೆ ಈ ನೆಲದ ಸಂಸ್ಕೃತಿ ನಾಶ!

**ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ಕನ್ನಡ ಭಾಷೆಯದ್ದು ಅವಿಚ್ಛಿನ್ನ ಪರಂಪರೆ. ಇದಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು, ಅದ್ಭುತವಾದ ಭವ್ಯ ಪರಂಪರೆ ಹೊಂದಿದೆ. ಕನ್ನಡ ಭಾಷೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಕೆಲಸವನ್ನು ಇಂದಿನ ಮಕ್ಕಳು ರೂಢಿಸಿಕೊಳ್ಳಬೇಕು ಎಂದು ಮುಖ್ಯಶಿಕ್ಷಕ ಸುರೇಶಗೌಡ ಬಿರಾದಾರ ಹೇಳಿದರು.

ಅವರು ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಅನೇಕ ಕನ್ನಡ ಶಬ್ದಗಳು, ಕ್ರಿಯಾಪದಗಳು ಇದೀಗ ಮಾಯವಾಗುತ್ತಿವೆ. ಭಾಷೆ ಬಳಸುತ್ತಿದ್ದರೆ ಮಾತ್ರ ಅವು ಉಳಿಯುತ್ತವೆ. ಕನ್ನಡ ಭಾಷೆ ನಾಶವಾದರೆ ಈ ನೆಲದ ಸಂಸ್ಕೃತಿ ನಾಶವಾಗುತ್ತದೆ. ಈ ಹಿನ್ನೆಲೆಯಲ್ಲಿ ನಾಡಿನ ಆಧಾರ ಸ್ಥಂಭಗಳಾದ ಮಕ್ಕಳು ಮಾತೃಭಾಷೆಯನ್ನು ಉಳಿಸಲು ಮುಂದಾಗಬೇಕು ಎಂದು ಅಭಿಪ್ರಾಯಪಟ್ಟರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ, ಕನ್ನಡ ಭಾಷೆ, ನಾಡು– ನುಡಿ– ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಕನ್ನಡಿಗರು ಜವಾಬ್ದಾರಿ ಹೊತ್ತುಕೊಳ್ಳಬೇಕು. ಅನೇಕ ಮಹನೀಯರು ಕನ್ನಡದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವುಗಳನ್ನು ಉಳಿಸುವ ಹೊಣೆ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಸಂಸ್ಥೆಯ ಕಾರ್ಯದರ್ಶಿ ಸುನಂದಾ ಹುಣಶ್ಯಾಳ,

ಶಿಕ್ಷಕರಾದ ರಾಘು ಮೊಗಳ, ಭೀಮಾಶಂಕರ ಕೋರೆ, ಬಸಮ್ಮ ವಡಗೇರಿ, ಜಯಶ್ರೀ ಬಂಗಾರಿ, ಮಧುಮತಿ ನಿಕ್ಕಂ, ಸರೋಜಿನಿ ಕಟ್ಟಿಮನಿ, ರೇಣುಕಾ ಭಜಂತ್ರಿ, ಎಲ್ ಎಂ ಮೇತ್ರಿ ಹಾಗೂ ಸಿಬ್ಬಂದಿಗಳಾದ ವೀರೇಶ ಹುಣಶ್ಯಾಳ,

ಸಿದ್ದಣ್ಣ ಅರಕೇರಿ ಸೇರಿದಂತೆ ಶಾಲಾ ಮಕ್ಕಳು ಭಾಗವಹಿಸಿದ್ದರು.

# ಹೊಟ್ಟೆ ಪಾಡಿಗಾಗಿ..

ಈಗಲೂ ಅಸ್ತಿತ್ವದಲ್ಲಿರುವ ಒಂದು ವೃತ್ತಿ ಅಥವಾ ಹೊಟ್ಟೆ ಪಾಡಿನ ಮಾರ್ಗ..

ಸಣ್ಣ ವರ್ಗ ಅಥವಾ ವೃತ್ತಿಯೊಂದು ಅಸ್ತಿತ್ವದಲ್ಲಿದೆ. ಸಾಮಾನ್ಯ ಜನರಿಗೆ ಇದು ಅಷ್ಟು ಪರಿಚಿತವಲ್ಲ. ಎಲ್ಲೋ ಕೆಲವು ವೇಳೆ ಕೇಳಿರಬಹುದು ಅಥವಾ ಓದಿರಬಹುದು. ಆದರೆ ಸಮಾಜದ ಆಂತರ್ಯದಲ್ಲಿ ಈಗಲೂ ಚಲಾವಣೆಯಲ್ಲಿದೆ.

ಭಾರತೀಯ ಸಮಾಜದಲ್ಲಿ ಸಾಮಾನ್ಯವಾಗಿ ವೇಶ್ಯಾ ವೃತ್ತಿಯನ್ನು ಅತ್ಯಂತ ಕೆಟ್ಟ ಕೀಳು ವೃತ್ತಿ ಅಥವಾ ದಂಧೆ ಎಂದು ಭಾವಿಸಲಾಗುತ್ತದೆ. ( ವಾಸ್ತವದಲ್ಲಿ ಮತ್ತು ಎಲ್ಲವನ್ನೂ ಪರಿಗಣನೆಗೆ ತೆಗೆದುಕೊಂಡರೆ ಅದು ನಿಜವಲ್ಲ. ಅದು ಬೇರೆ ವಿಷಯ ) ಆದರೆ ಅದಕ್ಕಿಂತಲೂ ಅತ್ಯಂತ ನೀಚ ವೃತ್ತಿಯೊಂದಿದೆ. ಇದು ಮಾನವೀಯ ಸಂಬಂಧಗಳ ಎಲ್ಲಾ ಮಿತಿಯನ್ನು ದಾಟಿ ಲೆಕ್ಕಕ್ಕೆ ಸಿಗುವುದಿಲ್ಲ. ಅಸಹ್ಯ ಎಂದು ಕರೆಯಬಹುದಾದ ವೃತ್ತಿ ಇದು.

ಆಳ್ಕಟಿಗಳು ಅಥವಾ ಪಿಂಪಗಳು ಅಥವಾ ತಡೆಹಿಡುಕರು ಅಥವಾ ಮಾಮಾಗಳು ಎಂದು ಲೋಕಾಭಿರಾಮವಾಗಿ ಕರೆಯಲಾಗುವ ಜನರು ಮಾಡುವ ವೃತ್ತಿಯೇ ಇದು.

ಮನುಷ್ಯರನ್ನು, ಅವರ



ಪ್ರಬುದ್ಧ ಮನಸ್ಸು ಸಮಾಜ

ವಿವೇಕಾನಂದ ಎಚ್. ಕೆ.

**ಉದಯರಶ್ಮಿ ದಿನಪತ್ರಿಕೆ**

ದೇಹವನ್ನು, ಅವರ ಭಾವನೆಗಳನ್ನು, ಅವರ ನಂಬಿಕೆಗಳನ್ನು, ಅವರ ಸಂಬಂಧಗಳನ್ನು, ಸಮಾಜದ ಮೌಲ್ಯಗಳನ್ನು ಮಾರಾಟ ಮಾಡಿ ಜೀವನ ಸಾಗಿಸುವುದೇ ಇವರ ವೃತ್ತಿ.

ಆಶ್ಚರ್ಯ ಪಡಬೇಡಿ. ಇದು ಸಮಾಜದ ಯಾವುದೋ ಒಂದು ನಿರ್ಧಿಷ್ಟ ಕ್ಷೇತ್ರಗಳಿಗೆ ಮಾತ್ರ ಸೀಮಿತವಾಗಿಲ್ಲ. ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಎಲ್ಲಾ ಕ್ಷೇತ್ರಗಳನ್ನು ಆಕ್ರಮಿಸಿದೆ.

ಆದರೆ ಅತಿಹೆಚ್ಚು ಪ್ರಮಾಣದಲ್ಲಿ ಬಹಿರಂಗವಾಗಿ ಕಾಣಸಿಗುವುದು ವೇಶ್ಯಾವಾಟಿಕೆ, ರೌಡಿಸಂ, ರಾಜ–ಕೀಯ, ಕಳ್ಳಭಟ್ಟಿ, ಜೂಜು ಅಡ್ಡೆಗಳು ಮುಂತಾದ ಅನೈತಿಕ ಮತ್ತು ಕಾನೂನು ಬಾಹಿರ ಚಟುವಟಿಕೆ ಇರುವ



ಕಡೆಗಳಲ್ಲಿ..

ಇಲ್ಲಿ ಬಹುತೇಕ ಸ್ನೇಹ ಪ್ರೀತಿ ವಿಶ್ವಾಸ ನಂಬಿಕೆಗಳಿಗೆ ಹೆಚ್ಚಿನ ಜಾಗವಿಲ್ಲ. ತನ್ನ ಸ್ವಂತ ಲಾಭವೇ ಎಲ್ಲವೂ ಆಗಿರುತ್ತದೆ. ದುಡ್ಡಿಗಾಗಿ ಏನು ಮಾಡಲು ಸಿದ್ದ–ರಿರುವ ಮತ್ತು ಸಿದ್ದರಾಗಬೇಕಿರುವ ವೃತ್ತಿಪರತೆ ಇಲ್ಲಿರುತ್ತದೆ.

ಬಹುಶಃ ಈ ವೃತ್ತಿಯಲ್ಲಿರುವ ಯಾರೂ ಎಂದಿಗೂ ತಮ್ಮ ಬದುಕಿನ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಲು ಪ್ರಯತ್ನಿಸುವುದಿಲ್ಲ. ಹಾಗೇನಾದರೂ ಮಾಡಿಕೊಂಡರೆ ಅವರಿಗೆ ತಮ್ಮ ಬಗ್ಗೆಯೇ ಜಿಗುಪ್ಸೆ ಉಂಟಾಗುತ್ತದೆ ಅಥವಾ ಆತ್ಮಹತ್ಯೆಗೆ ಯತ್ನಿಸಬಹುದು.

ಅಷ್ಟೊಂದು ಹೀನ ವೃತ್ತಿಯದು.


ಬದುಕಿನ ಅನಿವಾರ್ಯತೆಗೋ, ಅವಕಾಶದಿಂದಲೋ, ಸಹವಾಸದಿಂದಲೋ, ಸುಖಲೋಲುಪತೆಯಾ ದುರಾಸೆಯಿಂದಲೋ, ದುಶ್ಚಟಗಳ ದಾಸರಾಗಿಯೋ, ಅಸಹಾಯಕತೆಯಿಂದಲೋ ಈ ವೃತ್ತಿಯನ್ನು ಮಾಡುತ್ತಿರುತ್ತಾರೆಯೇ ಹೊರತು ಇಷ್ಟ ಪಟ್ಟು ಯಾರೂ ಇದನ್ನು ಆಯ್ಕೆ ಮಾಡಿಕೊಳ್ಳುವುದಿಲ್ಲ. ಕೆಲವೊಮ್ಮೆ ಏನೋ ಮಾಡಲು ಹೋಗಿ ಇನ್ನೇನೋ ಆಗಿರುವ ಸಾಧ್ಯತೆಯೂ ಇದೆ.

ಪ್ರಜಾಪ್ರಭುತ್ವದ ದೇವಾಲಯ ಎಂದು ಪರಿಗಣಿಸಲಾದ ವಿಧಾನಸೌದದಿಂದ ಬಸ್ ನಿಲ್ದಾಣದವರೆಗೆ, ದೊಡ್ಡ ದೊಡ್ಡ ಸ್ಟಾರ್ ಹೋಟೆಲುಗಳಿಂದ ಗುಡಿಸಲಿನವರೆಗೆ, ಸಾಹಿತ್ಯ ಕ್ಷೇತ್ರದಿಂದ ಕೂಲಿ ಕೆಲಸದವರೆಗೆ, ಪದವಿದರರಿಂದ ಅನಕ್ಷರಸ್ಥರವರೆಗೆ ಗಂಡು ಹೆಣ್ಣು ಎಂಬ ಭೇದವಿಲ್ಲದೆ ಈ ವೃತ್ತಿಯಲ್ಲಿ ಕೆಲವರು ಕಾಣಿಸಿಕೊಂಡಿದ್ದಾರೆ.

ಈ ವೃತ್ತಿಯಿಂದ ಸಾಕಷ್ಟು ಶ್ರೀಮಂತರಾದವರು ಇದ್ದಾರೆ ಹಾಗೆಯೇ ಇಡೀ ಬದುಕನ್ನು ಹೊಟ್ಟೆ ಪಾಡಿಗಾಗಿ ನಿರ್ವಹಿಸುತ್ತಲೇ ಕಳೆದವರು ಇದ್ದಾರೆ. ಇದರ ಸುಳಿಗೆ ಸಿಲುಕಿ ಪಾರಾದವರು ಇದ್ದಾರೆ. ನಾಶವಾದವರು ಇದ್ದಾರೆ.

ಎಷ್ಟೋ ಹಣ ಅಧಿಕಾರ ಹೊಂದಿದ ಸಮಾಜದ ಮುಂದೆ ಸಭ್ಯತೆಯ ಮುಖವಾಡ ಧರಿಸಿಕೊಂಡಿರುವ ಜನರಿಗೆ ತಮ್ಮ ತೆವಲುಗಳನ್ನು ನೇರವಾಗಿ ಪೂರೈಸಿಕೊಳ್ಳುವುದು ಸಾಧ್ಯವಾಗುವುದಿಲ್ಲ ಅಥವಾ ಅವರಿಗೆ ಅದರ ಸುಲಭ ಮಾರ್ಗ






ತಿಳಿದಿರುವುದಿಲ್ಲ. ಅಂತಹವರ ನೆರವಿಗೆ ಯಾವುದೋ ರೀತಿಯಲ್ಲಿ ನೆರವಾಗುವವರು ಈ ತಲೆಹಿಡುಕರು.

ವಿಚಿತ್ರವೆಂದರೆ, ನೇರವಾಗಿ ಇಲ್ಲಿ ಯಾವುದೇ ಕಾನೂನಿನ ಉಲ್ಲಂಘನೆಯಾಗುವುದಿಲ್ಲ. ಎಲ್ಲವೂ ತೆರೆಮರೆಯಲ್ಲಿ ಒಪ್ಪಿತ ಕೆಲಸಗಳೇ ಆಗಿರುತ್ತವೆ. ದುಡ್ಡು ಮಾತ್ರವೇ ಇಲ್ಲಿ ಮುಖ್ಯ. ಅನೈತಿಕ ವ್ಯವಹಾರವಾದ್ದ–ರಿಂದ ಏನೇ ದೋಖಾ ಅಥವಾ ವಂಚನೆಯಾದರೂ ಬಹಿರಂಗವಾಗುವುದು ಅಪರೂಪ.

ಬ್ಲಾಕ್ ಮೇಲ್, ಹನಿ ಟ್ರ್ಯಾಪ್, ಹಿಡನ್ ಕ್ಯಾಮರಾದಲ್ಲಿ ಕದ್ದು ದೃಶ್ಯ ಸೆರೆಹಿಡಿಯುವುದು, ಸುದ್ದಿ ಮಾಧ್ಯಮಗಳಲ್ಲಿ ಪ್ರಚಾರ ಮಾಡಿ ಮಾನ ಕಳೆಯುವ ಬೆದರಿಕೆ, ಸಂಸಾರ ಒಡೆಯುವ, ಸುಳ್ಳು ಸುದ್ದಿಯ ಸೃಷ್ಟಿ, ನಂಬಿಸಿ ಕತ್ತು ಕೊಯ್ಯುವ ನೀಚತನ ಎಲ್ಲವೂ ಈ ವೃತ್ತಿಯ ಭಾಗಗಳು.

ಇದರ ಬಗ್ಗೆ ಪೋಲಿಸ್ ಇಲಾಖೆಯವರು, ರಾಜಕಾರಣಿಗಳು, ರೌಡಿಗಳು, ಮಾಧ್ಯಮದವರು ಸಾಕಷ್ಟು ಮಾತನಾಡಿಕೊಳ್ಳುತ್ತಾರೆ. ಅವರಲ್ಲಿಯೇ ಕೆಲವರು ಈ ಮುಖವಾಡವನ್ನು ಹೊಂದಿದ್ದಾರೆ. ಇದು ಹೊಸ ವೃತ್ತಿಯೇನು ಅಲ್ಲ. ನಾಗರಿಕ ಸಮಾಜದ ಉಗಮದಿಂದಲೂ ಪರೋಕ್ಷವಾಗಿ ಅಸ್ತಿತ್ವದಲ್ಲಿದೆ. ಇದರ ಬಗ್ಗೆ ಇನ್ನೂ ಸಾಕಷ್ಟು ಬಹಿರಂಗಪಡಿಸಲಾಗದ ವಿಷಯಗಳಿವೆ.

ಏನೇ ಆಗಲಿ, ಮನುಷ್ಯನೊಬ್ಬ ಮಾಡಬಹುದಾದ ಅತ್ಯಂತ ನೀಚತನದ ಮಾನವೀಯತೆಗೆ ಕಪ್ಪುಚುಕ್ಕೆಯಾದ ಇದರ ಸುಳಿಗೆ ಯಾರೂ ಸಿಲುಕುವ ಅನಿವಾರ್ಯ ಪರಿಸ್ಥಿತಿ ಸೃಷ್ಟಿಯಾಗಬಾರದು. ಅದು ವ್ಯವಸ್ಥೆಯ ಜವಾಬ್ದಾರಿ.

ನಮ್ಮ ಆತ್ಮಾವಲೋಕನ, ಜವಾಬ್ದಾರಿ ಮತ್ತು ಎಚ್ಚರಿಕೆಯ ಸಲುವಾಗಿ ಈ ಕೆಲವು ಕವಿ ಸಾಲುಗಳು..

ಜಗವೆಲ್ಲ ನಗುತಿರಲಿ ಜಗದಳುವು ನನಗಿರಲಿ..

ನೀ ನಡೆವ ಹಾದಿಯಲ್ಲಿ ನಗೆ ಹೂವು ಬಾಡದಿರಲಿ..

ನಿದ್ದೆಗೊಮ್ಮೆ ನಿತ್ಯ ಮರಣ,

ಎದ್ದ ಸಲ ನವೀನ ಜನನ..